ಗರಿಷ್ಠ 37°C | ಕನಿಷ್ಠ 24°C

ಮುಷ್ಕರಕ್ಕೆ ವಿಧಾನಪರಿಷತ್ ಸದಸ್ಯ ಸಂಕನೂರ ಬೆಂಬಲ

ಗದಗ: ಕರ್ನಾಟಕ ಪಶುವೈದ್ಯಕೀಯ ವಿಶ್ವವಿದ್ಯಾಲಯಗಳ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಧ್ಯಾಪಕರಿಗೆ ಕಳೆದ 7 ವರ್ಷಗಳಿಂದ ನೀಡುತ್ತಿರುವ ನಾನ್ ಪ್ರಾಕ್ಟಿಸಿಂಗ್ ವಿಶೇಷ ಭತ್ಯೆ (ಎನ್‌ಪಿಎ) ಸ್ಥಗಿತಗೊಳಿಸಿ ಹೊರಡಿಸಿರುವ ಆದೇಶವನ್ನು ವಿರೋಧಿಸಿ ಪ್ರತಿಭಟನೆ ನಡೆಸುತ್ತಿರುವ ಮುಷ್ಕರಕ್ಕೆ ವಿಧಾನಪರಿಷತ್ ಸದಸ್ಯ ಎಸ್.ವಿ. ಸಂಕನೂರ ಬೆಂಬಲ ಸೂಚಿಸಿದರು.

ಪಶುವೈದ್ಯಕೀಯ ಕಾಲೇಜಿನಲ್ಲಿ ಪಶುವೈದ್ಯಕೀಯ ಕಾಲೇಜುಗಳರಾಜ್ಯಮಟ್ಟದಶಿಕ್ಷಕರಸಂಘಟನೆಯಿಂದ ಹಮ್ಮಿಕೊಂಡ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ ಮಾತನಾಡಿದ ಅವರು, ಕೇಂದ್ರದ ಐಸಿಆರ್ ನಿಯಮದ ಅಡಿ ಹಾಗೂ ಸಂಪುಟದ ನಿರ್ಣಯದ ಹಿನ್ನೆಲೆ ಮೂಲ ವೇತನದ ಶೇ. 20ರಷ್ಟು ನೀಡುತ್ತ ಬಂದಿರುವ ನಾನ್ ಪ್ರಾಕ್ಟಿಸಿಂಗ್ ವಿಶೇಷ ಭತ್ಯೆಯನ್ನು ಸ್ಥಗಿತಗೊಳಿಸಿರುವುದು ಸರಿಯಲ್ಲ. ಇದನ್ನು ತಕ್ಷಣ ವಾಪಸ್ ಪಡೆಯಬೇಕೆಂದು ಒತ್ತಾಯಿಸಿದರು.

ಶಿಕ್ಷಕರ ಸಂಘಟನೆಯ ಸಂಘಟನಾ ಕಾರ್ಯದರ್ಶಿ ಡಾ. ವಿನಯ ಟಿಕಾರೆ ಮಾತನಾಡಿದರು. ಪಶು ವೈದ್ಯಕೀಯ ಮಹಾವಿದ್ಯಾಲಯದ ಡೀನ್ ಡಾ. ರಾಮಚಂದ್ರ, ಸಂಘದ ರಾಜ್ಯಾಧ್ಯಕ್ಷ ಡಾ. ಬಿ. ಎಲ್. ಚವಾಣ, ಇತರರು ಇದ್ದರು.



ನರಗುಂದದ ಸರಸ್ವತಿ ನಗರದ ಸರಸ್ವತಿ ದೇವಿ ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಎಸ್ಸೆಸ್ಸೆಲ್ಸಿ, ಪಿಯುಸಿಯಲ್ಲಿ ಶೇ. 80ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಬಸವರಾಜ ಬ್ಯಾಹಟ್ಟಿ, ಕೆ.ಎಸ್. ದೊಡಮನಿ ಇತರರು ಇದ್ದರು.



ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಗದುಗಿನ ಪಶುವೈದ್ಯಕೀಯ ಕಾಲೇಜಿನಲ್ಲಿ, ಪಶುವೈದ್ಯಕೀಯ ಕಾಲೇಜುಗಳ ರಾಜ್ಯಮಟ್ಟದ ಶಿಕ್ಷಕರ ಸಂಘಟನೆಯಿಂದ ಹಮ್ಮಿಕೊಂಡ ಪ್ರತಿಭಟನಾ ಸ್ಥಳಕ್ಕೆ ವಿಧಾನಪರಿಷತ್ ಸದಸ್ಯ ಎಸ್.ವಿ. ಸಂಕನೂರ ಭೇಟಿ ನೀಡಿ ಮನವಿ ಸ್ವೀಕರಿಸಿದರು.

ಸುದ್ದಿ ಸಿಂಚನ

ಬದುಕಿನಲ್ಲಿ ಉತ್ತಮ ಮೌಲ್ಯ ಅಳವಡಿಸಿಕೊಳ್ಳಿ

ನರಗುಂದ: ವಿಶ್ವದ ಆಧ್ಯಾತ್ಮಿಕ ಕೇಂದ್ರ ಭಾರತದ ಪ್ರಜೆಗಳಾದ ನಾವು ಬದುಕಿನಲ್ಲಿ ಉತ್ತಮ ಮೌಲ್ಯ ಅಳವಡಿಸಿಕೊಂಡು ಆದರ್ಶ ಬದುಕು ಕಟ್ಟಿಕೊಳ್ಳಬೇಕು ಎಂದು ಪಂಚಗೃಹ ಗುಡ್ಡದ ಹಿರೇಮಠದ ಸಿದ್ಧಲಿಂಗ ಶಿವಾಚಾರ್ಯರು ಶ್ರೀಗಳು ತಿಳಿಸಿದರು. ಪಟ್ಟಣದ ಸರಸ್ವತಿ ನಗರದ ಸರಸ್ವತಿ ದೇವಿ ಜಾತ್ರಾ ಮಹೋತ್ಸವ ನಿಮಿತ್ತ ಆಯೋಜಿಸಿದ್ದ ಪುರಾಣ ಮಂಗಲೋತ್ಸವದ ಸಾನ್ನಿಧ್ಯ ವಹಿಸಿ ಮಾತನಾಡಿ, ಮಕ್ಕಳಿಗೆ ಒಳ್ಳೆಯ ಸಂಸ್ಕಾರ ಮತ್ತು ಒಳ್ಳೆಯ ವಿದ್ಯಾಭ್ಯಾಸ ನೀಡಿದರೆ ಸುಸಂಸ್ಕೃತ ಸಮಾಜ ನಿರ್ಮಾಣ ಮಾಡಲು ಸಾಧ್ಯ ಎಂದರು. ಸಿದ್ಧಾರೂಢ ಶರಣರ ಚರಿತಾಮೃತ ಪ್ರವಚನ ನೀಡಿದ ಬನಹಟ್ಟಿಯ ಶೇಖರಯ್ಯ ಹಿರೇಮಠ, ತಬಲಾ ನುಡಿಸಿದ ಈಶ್ವರಪ್ಪ ಬಾಳಿಕಾಯಿ, ಸಂಗೀತ ಸಾಥ್ ನೀಡಿದ ಬಸನಗೌಡ ಕಲ್ಲನಗೌಡ್ರ ಅವರನ್ನು ಓಣಿಯ ಪ್ರಮುಖರು ಸನ್ಮಾನಿಸಿದರು. ಟ್ರಸ್ಟ್ ಕಮಿಟಿ ಪದಾಧಿಕಾರಿಗಳಾದ ಬಸವರಾಜ ಬ್ಯಾಹಟ್ಟಿ, ಕೆ. ಎಸ್. ದೊಡಮನಿ, ಸಿ.ಎಚ್. ಸಂಗಳಮಠ, ಎಸ್.ಬಿ. ಚನ್ನವೀರಗೌಡ್ರ, ಯು.ಐ. ಬದ್ದಿಕಾಯಿ, ಜಿ.ಬಿ. ತಳವಾರ, ವೈ.ಐ. ಕುಂಬಾರ, ಬಿ.ಎ. ಕುರಿ, ಎಸ್.ಬಿ. ಕರಮಡಿ, ಬಿ.ಎಸ್. ಪೂಜಾರ, ಎಸ್.ವಿ. ಅಲ್ಲಮಪ್ರಭು ದೇವರಮಠ, ದೊಡಮನಿ, ಎನ್.ಡಿ. ಕಿತ್ತೂರ, ಎಲ್.ಬಿ. ಮಂಟೂರ, ಎಂ.ಎಸ್. ಹಿರೇಮಠ, ಪ್ರಕಾಶ ನಂದಿ, ಪ್ರಮೋದ ಪಾಟೀಲ, ಬಸವರಾಜ ಚವಡಿ, ಸೋಮಲಿಂಗಪ್ಪ ಕಲಹಾಳ, ಎಚ್.ಡಿ. ಭಜಂತ್ರಿ, ವಿ.ಕೆ. ಹಿರೇಗೌಡ್ರ, ಆರ್.ಸಿ. ಅಂಗಡಿ, ಆರ್.ಬಿ. ಚಿನಿವಾಲರ ಇದ್ದರು.

ಚಂದ್ರಶೇಖರಪ್ಪ ಗಡಗಿ ನಿಧನ

ಡಂಬಳ: ಗ್ರಾಮದ ರಡ್ಡಿ ಸಮಾಜದ ಹಿರಿಯರು,



ಈರುಳ್ಳಿ ಬೆಳೆಗಾರರ ಸಂಘದ ರಾಜ್ಯ ಮಾಜಿ ಅಧ್ಯಕ್ಷ ಚಂದ್ರಶೇಖರಪ್ಪ ಬಾಳಪ್ಪ ಗಡಗಿ(75) ಮಂಗಳವಾರ ನಿಧನರಾದರು. ಅವರಿಗೆ ಪತ್ನಿ, ಮೂವರು ಪುತ್ರರು, ಪುತ್ರಿ ಸೇರಿದಂತೆ ಅಪಾರ ಬಂಧುಗಳಿದ್ದಾರೆ. ಮೃತರ ಅಂತ್ಯಕ್ರಿಯೆ ಬುಧವಾರ ಮಧ್ಯಾಹ್ನ 12 ಗಂಟೆಗೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮಾರುಕಟ್ಟೆ ಧಾರಣೆ

ಗದಗ

ಉತ್ಪನ್ನ	ಕನಿಷ್ಠ	ಗರಿಷ್ಠ
ಕಡಲೆ	1412	5670
ಉದ್ದಿನಕಾಳು	2244	4244
ಹರಳು ಬೀಜ	3814	3814
ಅಲಸಂದೆ	2011	5509
ಬಟಾಣೆ	5160	5160
ಹೆಸರು	1569	6531
ಗೆಜ್ಜೆ ಶೇಂಗಾ	4670	6727
ಹುರುಳಿ ಕಾಳು	3519	4469
ಜೋಳ	2399	4412
ಮೆಕ್ಕೆಜೋಳ	1269	1685
ನವಣೆ	4700	4700
ಕುಸುಬೆ	2311	5309
ಸೂರ್ಯಕಾಂತಿ	5869	6502
ತೊಗರಿ	4714	5569
ಗೋದಿ	1902	4897

ಲಕ್ಷ್ಮೇಶ್ವರ

ಉತ್ಪನ್ನ	ಕನಿಷ್ಠ	ಗರಿಷ್ಠ
ಅಲಸಂದೆ ಕಾಳು	4108	5389
ಕಡಲೆ	4159	5495
ಹೆಸರು	3585	4196
ಗೆಜ್ಜೆ ಶೇಂಗಾ	2598	8438
ಜೋಳ	1609	3570
ಮೆಕ್ಕೆಜೋಳ	1715	1715
ಸಾಸಿವೆ	5029	5819
ಕುಸುಬೆ	2089	5439
ತೊಗರಿ	4560	5619

ಕೋಟ್ಯಂತರ ರುಪಾಯಿ ಮೌಲ್ಯದ ಮೊಬೈಲ್ ಮರಳಿ ಮಾಲೀಕರಿಗೆ!

ಜಿಲ್ಲಾ ಪೊಲೀಸ್ ಇಲಾಖೆಯ ವಿಶೇಷ ಕಾರ್ಯಾಚರಣೆ



ವಶಪಡಿಸಿಕೊಂಡಿರುವ ಮೊಬೈಲ್‌ಗಳೊಂದಿಗೆ ಪೊಲೀಸರು ಇದ್ದಾರೆ.

• **ಕನ್ನಡಪ್ರಭ ವಾರ್ತೆ** ಗದಗ

ಆಧುನಿಕ ಜೀವನದ ಅವಿಭಾಜ್ಯ ಅಂಗವಾಗಿರುವ ಮೊಬೈಲ್ ಫೋನ್‌ಗಳು ಕಳೆದುಹೋದರೆ ಅಥವಾ ಕಳ್ಳತನವಾದರೆ ಅವು ಮರಳಿ ಸಿಗುವುದು ಅಸಾಧ್ಯ ಎಂಬ ಸಾರ್ವಜನಿಕರ ಆತಂಕಕ್ಕೆ ಗದಗ ಜಿಲ್ಲಾ ಪೊಲೀಸರು ಈಗ ಭರವಸೆಯ ಉತ್ತರ ನೀಡಿದ್ದಾರೆ.

ಜಿಲ್ಲಾದ್ಯಂತನಡೆಸಲಾದವಿಶೇಷಕಾರ್ಯಾಚರಣೆಯ ಫಲವಾಗಿ ಕೇವಲ ನಾಲ್ಕು ತಿಂಗಳ ಅವಧಿಯಲ್ಲಿ ಪತ್ತೆಹಚ್ಚಲಾದ ಕೋಟ್ಯಂತರ ರು. ಮೌಲ್ಯದ ಮೊಬೈಲ್‌ಗಳನ್ನು ವಾರಸುದಾರರಿಗೆ ಹಸ್ತಾಂತರಿಸುವ ಮೂಲಕ ಇಲಾಖೆಯು ಜನಪರ ಕಾಳಜಿಯನ್ನು ಮೆರೆದಿದೆ.

ಪರಿಣಾಮಕಾರಿ ಅನುಷ್ಠಾನ:

ಕೇಂದ್ರ ಸರ್ಕಾರವು 2023ರ ಫೆಬ್ರವರಿಯಲ್ಲಿ ಜಾರಿಗೆ ತಂದ CEIR(Central Equipment Identity Register) ತಂತ್ರಾಂಶವನ್ನು ಜಿಲ್ಲೆಯಲ್ಲಿ ಅತ್ಯಂತ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗಿದೆ. ಸಾರ್ವಜನಿಕರು ದೂರು ನೀಡಲು ಕಾಯದೆ, ಇಲಾಖೆಯೇ ಸ್ವತಃ ಆಸಕ್ತಿ ವಹಿಸಿ ಮೊಬೈಲ್ ಪತ್ತೆ ಕಾರ್ಯಕ್ಕೆ ಚಾಲನೆ ನೀಡಿದ್ದು, ಈ ಯಶಸ್ಸಿನ ಹಿಂದಿನ ರಹಸ್ಯವಾಗಿದೆ.

ಈ ತಂತ್ರಜ್ಞಾನವನ್ನು ಬಳಸಿಕೊಂಡು ಪ್ರಸಕ್ತ ಜ. 1ರಿಂದ ಈವರೆಗೆ ಜಿಲ್ಲೆಯ ವಿವಿಧ ಭಾಗಗಳಲ್ಲಿ ಕಳೆದುಹೋಗಿದ್ದ ಅತಿ ಹೆಚ್ಚು ಮೌಲ್ಯದ ಮೊಬೈಲ್‌ಗಳನ್ನು ತಾಂತ್ರಿಕವಾಗಿ ಟ್ರ್ಯಾಕ್ ಮಾಡಿ ಜಪ್ತಿ ಮಾಡಲಾಗಿದೆ.

ಈ ಬೃಹತ್ ಕಾರ್ಯಾಚರಣೆಯ ಯಶಸ್ಸಿನ ಹಿಂದೆ ಜಿಲ್ಲೆಯ ಹಿರಿಯ ಅಧಿಕಾರಿಗಳ ಮಾರ್ಗದರ್ಶನ ಹಾಗೂ ತಳಮಟ್ಟದ ಸಿಬ್ಬಂದಿ ಶ್ರಮ ಅಡಗಿದೆ.

ಸರ್ವರ ಶ್ರಮವಿದೆ: ಜಿಲ್ಲೆಯ ಎಲ್ಲ ಡಿಎಸ್ಪಿ, ಸಿಪಿಐ, ಪಿಎಸ್‌ಐ ತಮ್ಮ ತಮ್ಮ ವ್ಯಾಪ್ತಿಯಲ್ಲಿ ಹಗಲಿರುಳು ಶ್ರಮಿಸಿದ್ದು, ವಿಶೇಷವಾಗಿ ತಾಂತ್ರಿಕ ವಿಭಾಗದ ಎಎಸ್‌ಐ ಗುರುರಾಜ ಬೂದಿಹಾಳ ಮತ್ತು ಸಂಜೀವ ಕೊರಡೂರ ಅವರ ತಂಡವು ತಾಂತ್ರಿಕ ನೈಪುಣ್ಯತೆಯ ಮೂಲಕ ಮೊಬೈಲ್‌ಗಳ ನಿಖರ ಸ್ಥಳವನ್ನು ಪತ್ತೆಹಚ್ಚುವಲ್ಲಿ ಪ್ರಮುಖ ಪಾತ್ರ ವಹಿಸಿದೆ.

ಮೊಬೈಲ್ ಮರಳಿಸಿದ ಕುರಿತು ಠಾಣಾವಾರು ಮಾಹಿತಿ ಹೀಗಿದೆ. ರೋಣ 166, ಗದಗ ಶಹರ 131, ಮುಂಡರಗಿ 109, ಲಕ್ಷ್ಮೇಶ್ವರ 83, ಗದಗ ಗ್ರಾಮೀಣ 83, ಗಜೇಂದ್ರಗಡ 53, ಬಡಾವಣೆ ಠಾಣೆ 46, ನರಗುಂದ 41, ಇತರೆ ಠಾಣೆಗಳಲ್ಲಿ 57 ಮೊಬೈಲ್‌ಗಳನ್ನು ಮಾಲೀಕರಿಗೆ ಮರಳಿಸಲಾಗಿದೆ.

ಬಹುಮಾನ ಘೋಷಣೆ: ಅಮೂಲ್ಯವಾದ ಮೊಬೈಲ್ ಮತ್ತು ಅದರಲ್ಲಿನ ದತ್ತಾಂಶವನ್ನು ಮರಳಿ ಪಡೆದ ಸಾರ್ವಜನಿಕರ ಮುಖದಲ್ಲಿ ನೆಮ್ಮದಿಯ ನಗು ಕಂಡುಬಂದಿದೆ. ಕರ್ತವ್ಯದ ಬಗ್ಗೆ ಅದಮ್ಯ ನಿಷ್ಠೆತೋರಿದ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗವನ್ನು ಎಸ್‌ಪಿ ರೋಹನ ಜಗದೀಶ ಮುಕ್ತ ಕಂಠದಿಂದ ಶ್ಲಾಘಿಸಿದ್ದು, ಉತ್ತಮ ಸಾಧನೆ ಮಾಡಿದ ಇಡೀ ತಂಡಕ್ಕೆ ವಿಶೇಷ ನಗದು ಬಹುಮಾನ ಮತ್ತು ಪ್ರಶಸ್ತಿಯನ್ನು ಘೋಷಿಸಿದ್ದಾರೆ.

> **ಮೊಬೈಲ್ ಕಳೆದುಹೋದರೆ ತಕ್ಷಣ ಸಿಇಐಆರ್‌ಪೋರ್ಟಲ್‌ನಲ್ಲಿ ನೋಂದಾಯಿಸಿ ಅಥವಾ ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡಿ. ಪೊಲೀಸ್ ಇಲಾಖೆ ನಿಮ್ಮ ಆಸ್ತಿ ರಕ್ಷಣೆಗೆ ಇಲಾಖೆ ಸದಾ ಸಿದ್ಧವಿದೆ.**
> • **ರೋಹನ್ ಜಗದೀಶ** ಎಸ್ಪಿ

> **ನಮ್ಮ ಮೊಬೈಲ್‌ಗಳನ್ನು ಮರಳಿ ಪಡೆದಿದ್ದೇವೆ. ಇದು ಪೊಲೀಸರ ಶ್ರಮದಿಂದ ಸಾಧ್ಯವಾಗಿದೆ. ಕರ್ತವ್ಯದ ಬಗ್ಗೆ ಅದಮ್ಯ ನಿಷ್ಠೆ ಮತ್ತು ಶಿಸ್ತು ಪ್ರದರ್ಶಿಸಿದ ಅಧಿಕಾರಿಗಳು ಹಾಗೂ ಅವರಿಗೆ ಸೂಕ್ತ ಮಾರ್ಗದರ್ಶನ ನೀಡಿದ ಎಸ್ಪಿ ಸರ್ ಹಾಗೂ ಸಮಸ್ತ ಸಿಬ್ಬಂದಿಗೆ ಅಭಿನಂದನೆಗಳು.**
> • **ಮೊಬೈಲ್ ಮರಳಿ ಪಡೆದ ವ್ಯಕ್ತಿ**

- ದಾಖಲಾದ ಒಟ್ಟು ದೂರುಗಳು 5546
- ಪತ್ತೆಯಾದ ಮೊಬೈಲ್‌ಗಳು 3251
- ಹಸ್ತಾಂತರಿಸಲಾದ ಮೊಬೈಲ್ 769
- ಮರಳಿಸಿದ ಮೊಬೈಲ್ ಮೌಲ್ಯ ₹1,13 ಕೋಟಿ

ಕನ್ನಡ ಕೇವಲ ಭಾಷೆಯಲ್ಲ, ಕನ್ನಡಿಗರ ಅಸ್ಮಿತೆಯ ಪ್ರತೀಕ

ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಡಾ. ಪಿ.ಡಿ. ತೋಟದ



ಕಾರ್ಯಕ್ರಮವನ್ನು ಡಾ. ಪಿ.ಡಿ. ತೋಟದ ಉದ್ಘಾಟಿಸಿದರು.

• **ಕನ್ನಡಪ್ರಭ ವಾರ್ತೆ** ಲಕ್ಷ್ಮೇಶ್ವರ

ಕನ್ನಡ ಕೇವಲ ಒಂದು ಭಾಷೆಯಲ್ಲ. ಕನ್ನಡಿಗರ ಅಸ್ಮಿತೆ. ಎರಡು ಸಾವಿರ ವರ್ಷಗಳ ಇತಿಹಾಸ ಹೊಂದಿರುವ ಕನ್ನಡದ ಹಿರಿಮೆಯನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸುವ ಕಾರ್ಯ ಪ್ರತಿಯೊಬ್ಬ ಕನ್ನಡಿಗರಿಂದಲೂ ಆಗಬೇಕು ಎಂದು ಡಾ. ಪಿ.ಡಿ. ತೋಟದ ತಿಳಿಸಿದರು.

ಭಾನುವಾರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ದಿ ಯುನಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಹಮ್ಮಿಕೊಂಡಿದ್ದ ದತ್ತಿ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಉಪನ್ಯಾಸಕರವಿನೀರಲಗಿಮಾತನಾಡಿ, ಕನ್ನಡ ಕನ್ನಡಿಗರ ಪಾಲಿಗೆ ಕೇವಲ ಸಂವಹನ ಮಾಧ್ಯಮವಲ್ಲ, ಅದು ನಮ್ಮ ಸಂಸ್ಕೃತಿ, ಇತಿಹಾಸಮತ್ತುಅಸ್ಮಿತೆಯತಳಹದಿಯಾಗಿದೆ ಎಂದರು.

ಶಿಕ್ಷಕ ಸಾಹಿತಿ ಆರ್.ಎಸ್. ಪಾಟೀಲ ಮಾತನಾಡಿ, ನಮ್ಮ ಆಚಾರ- ವಿಚಾರ, ಹಬ್ಬ- ಹರಿದಿನ ಮತ್ತು ಮಾನವೀಯ ಸಂಬಂಧಗಳ ಮಹತ್ವವನ್ನು ಜಾನಪದ ಸಾಹಿತ್ಯ ಕಲಿಸುತ್ತದೆ. ಜನಪದ ಪರಂಪರೆ ಮತ್ತು ಸಂಸ್ಕೃತಿಯ ಮಾರ್ಗವಾಗಿದೆ ಎಂದರು.

ಮುಖ್ಯೋಪಾಧ್ಯಾಯ ಅರವಿಂದ ದೇಶಪಾಂಡೆ ಮಾತನಾಡಿ, ವ್ಯವಹಾರಿಕವಾಗಿ ಬೇರೆ ಭಾಷೆ ಬಳಸಿದರೂ ಅಂತರಂಗದ ಭಾಷೆಯಾಗಿ ಕನ್ನಡ ಬೇಕು ಎಂದರು.

ಚೇತನಾ ಕೋಳಿವಾಡ ಮಾತನಾಡಿ, ಸಮಕಾಲೀನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಎಷ್ಟೇ ಮುಂದುವರಿದಿದ್ದರೂ ಕನ್ನಡ ಭಾಷೆ ನಮ್ಮ ಅಸ್ತಿತ್ವವನ್ನು ಪ್ರತಿನಿಧಿಸುತ್ತದೆ ಎಂದರು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಈಶ್ವರ ಮೆಡ್ಲೇರಿ, ಸಾಹಿತಿ ಸುರೇಶ ತಂಗೋಡ ಮಾತನಾಡಿದರು.

ಕಸಾಪ ಸಂಘಟನಾ ಕಾರ್ಯದರ್ಶಿ ನಾಗರಾಜ ಮಜ್ಜಿಗುಡ್ಡ ಸ್ವಾಗತಿಸಿದರು. ಸಲಹಾ ಸಮಿತಿಯ ಈರಣ್ಣ ಗಾಣಿಗೇರ ನಿರೂಪಿಸಿದರು. ಗೌರವ ಕಾರ್ಯದರ್ಶಿ ವೀರಣ್ಣ ಅಕ್ಕೂರ ವಂದಿಸಿದರು. ಸಲಹಾ ಸಮಿತಿಯ ಎಸ್.ಬಿ. ಅಣ್ಣಿಗೇರಿ ಸನ್ಮಾನ ಕಾರ್ಯಕ್ರಮ ನಡೆಸಿಕೊಟ್ಟರು. ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಶಿಕ್ಷಕ ಶಶಿಕಾಂತ ಕುಂಬಾರ, ಸಿ.ಎಫ್. ಪಾಟೀಲ, ಎಲ್.ಆರ್. ಮಲಸಮುದ್ರ, ಪ್ರವೀಣ ಕುಂಬಾರ ಇದ್ದರು.

ಸೌಲಭ್ಯ ಪಡೆಯಲು ಸಂಘಟನೆ ಮುಖ್ಯ

ರಾಜ್ಯ ನೇಕಾರ ಸೇವಾ ಸಂಘದ ವಾರ್ಷಿಕೋತ್ಸವದಲ್ಲಿ ಶಿವಲಿಂಗ ಟರ್ಕಿ

• **ಕನ್ನಡಪ್ರಭ ವಾರ್ತೆ** ಗದಗ

ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಳ್ಳಲು ಸಂಘ, ಸಂಘಟನೆ ಮುಖ್ಯ. ಹೋರಾಟದಿಂದ ಮಾತ್ರ ಹಕ್ಕುಗಳನ್ನು ಪಡೆದುಕೊಳ್ಳಲು ಸಾಧ್ಯ ಎಂದು ರಾಜ್ಯ ನೇಕಾರ ಸೇವಾ ಸಂಘದ ರಾಜ್ಯಾಧ್ಯಕ್ಷ ಶಿವಲಿಂಗ ಟರ್ಕಿ ತಿಳಿಸಿದರು.

ಬೆಟಗೇರಿಯಲ್ಲಿ ನಡೆದ ರಾಜ್ಯ ನೇಕಾರ ಸೇವಾ ಸಂಘದ 12ನೇ ವಾರ್ಷಿಕೋತ್ಸವ ಹಾಗೂ ಕಾರ್ಮಿಕ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ, 1886ರ ಮೇ 1ರಂದು ಚಿಕ್ಯಾಗೋದಲ್ಲಿ ನಡೆದ ಮೊದಲ ಅಂತಾರಾಷ್ಟ್ರೀಯ ಕಾರ್ಮಿಕ ದಿನವನ್ನು ಆಚರಿಸಲಾಯಿತು. ಇದು 140ನೇ ಅಂತಾರಾಷ್ಟ್ರೀಯ ಕಾರ್ಮಿಕ ದಿನಾಚರಣೆ. ಹಾಗೆ ಭಾರತದಲ್ಲಿ 1923ರ ಮೇ 1ರಂದು ಚೆನ್ನೈನಲ್ಲಿ ಮೊದಲ ರಾಷ್ಟ್ರೀಯ ಕಾರ್ಮಿಕ ದಿನವನ್ನು ಆಚರಿಸಲಾಯಿತು ಎಂದರು.

ರಾಜ್ಯ ನೇಕಾರ ಸೇವಾ ಸಂಘದ ನಿರಂತರ ಹೋರಾಟದಫಲವಾಗಿನೇಕಾರಸನ್ಮಾನಯೋಜನೆಯಲ್ಲಿ 10 ಎಚ್‌ಪಿವರೆಗೆ ಉಚಿತ ವಿದ್ಯುತ್ ಮತ್ತು ಅಸಂಘಟಿತ ವಲಯದಲ್ಲಿ ನೇಕಾರರನ್ನು ಗುರುತಿಸಿರುವುದು. ಈ ಎಲ್ಲ ಬೆಳವಣಿಗೆಗಳು ಸಾಕಷ್ಟು ಹೋರಾಟದಿಂದ ಪಡೆದುಕೊಂಡಿದ್ದೇವೆ ಎಂದರು.



ರಾಜ್ಯ ನೇಕಾರ ಸೇವಾ ಸಂಘದ 12ನೇ ವಾರ್ಷಿಕೋತ್ಸವ ಹಾಗೂ ಕಾರ್ಮಿಕ ದಿನಾಚರಣೆ ಕಾರ್ಯಕ್ರಮ ನಡೆಯಿತು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಮಾತನಾಡಿ, ಸಮಾಜದಲ್ಲಿ ಗುರುತಿಸಿಕೊಳ್ಳಬೇಕಾದರೆ ಸಂಘಟನೆ ಮತ್ತು ಸಂಘದ ಜತೆಗೆ ಪಾಲ್ಗೊಳ್ಳುವುದರ ಮೂಲಕ ಮತ್ತು ಹೋರಾಟ ಮನೋಭಾವ ಬೆಳೆಯಬೇಕು ಎಂದರು.

ನಿವೃತ್ತ ಕಾರ್ಮಿಕ ಅಧಿಕಾರಿ ಚಂದ್ರಶೇಖರ್‌ಐಲಿ ಮಾತನಾಡಿ, ನಮಿಸುವ ಕೈಗಳಿಗಿಂತ ದುಡಿಯುವ ಕೈಗಳು ಶ್ರೇಷ್ಠ ಎಂಬಂತೆ ಕೆಲಸ ಮಾಡಿದಾಗ ಮಾತ್ರ ಯಶಸ್ಸು ಕಾಣಬಹುದು ಎಂದರು.

ಈ ವೇಳೆ ಅಸಂಘಟಿತ ವಲಯದ ಕಾರ್ಮಿಕರನ್ನು ಸನ್ಮಾನಿಸಲಾಯಿತು. ನೀಲಕಂಠೇಶ್ವರ ಮಠದ ಗುರುಗಳು ಸಾನ್ನಿಧ್ಯ ವಹಿಸಿದ್ದರು.

ಬೆಟಗೇರಿ ಪೊಲೀಸ್ ಠಾಣೆಯ ಪಿಎಸ್‌ಐ ಲಕ್ಷ್ಮಣ್ ಆರಿ, ರಮೇಶ್ ಹತ್ತಿಕಾಳ, ಮಾಧುಸ ಮೆರವಡೆ, ರಾಜು ದಡಿ, ಬಸವರಾಜ ಕರಿ, ಕೃಷ್ಣ ಕೊಪ್ಪರದ, ವಿರುಪಾಕ್ಷಿ ಐಲಿ, ನಾರಾಯಣಪ್ಪ, ಮಲ್ಲಿಕಾರ್ಜುನ ಗಡಿಗೆ ಇದ್ದರು. ಶಂಕರ್ ಕಾಕಿ ನಿರೂಪಿಸಿದರು. ತಾರಾ ಐಲಿ ವಂದಿಸಿದರು.

ಉದ್ಯೋಗ ವಿನಿಮಯ ಕಚೇರಿಯಿಂದ ನೇರ ಸಂದರ್ಶನ ಕಾರ್ಯಕ್ರಮ 8ರಂದು

ಗದಗ: ಜಿಲ್ಲೆಯ ನಿರುದ್ಯೋಗಿ ಅಭ್ಯರ್ಥಿಗಳಿಗೆ ಉದ್ಯೋಗ ಒದಗಿಸುವ ನಿಟ್ಟಿನಲ್ಲಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ನೇರ ಸಂದರ್ಶನವನ್ನು ಮೇ 8ರಂದು ಬೆಳಗ್ಗೆ 10ಕ್ಕೆ ವಿವೇಕಾನಂದ ನಗರ 4ನೇ ಅಡ್ಡ ರಸ್ತೆ ಸಾಯಿಬಾಬಾ ದೇವಸ್ಥಾನಹಿಂದುಗಡೆಕೆಎಚ್‌ಬಿಕಾಲನಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ನೇರ ಸಂದರ್ಶನದಲ್ಲಿ ಸ್ವತಂತ್ರ ಮೈಕ್ರೋಫಿನ್ ಪ್ರೈವೇಟ್ ಲಿಮಿಟೆಡ್ ಕಂಪನಿ ಭಾಗವಹಿಸಲಿದೆ. ವಿದ್ಯಾರ್ಹತೆ ಎಸ್ಸೆಸ್ಸೆಲ್ಸಿ, ಪಿಯುಸಿ, ಐಟಿಐ ಮತ್ತು ಯಾವುದೇ ಪದವಿ, ಹುದ್ದೆ ಎಸ್‌ಎಫ್‌ಒ(ಫೀಲ್ಡ್ ವರ್ಕ್) ವಯಸ್ಸು 18ರಿಂದ 30(ಪುರುಷ ಮತ್ತು ಮಹಿಳೆ).

ನೇರ ಸಂದರ್ಶನದಲ್ಲಿ ಭಾಗವಹಿಸಿದ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿದೆ. ಯುವನಿಧಿ ಯೋಜನೆಯ ಫಲಾನುಭವಿಗಳು ನೇರ ಸಂದರ್ಶನದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿ ಮೊ. 8951460061, 6363330688 ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ. ಎನ್. ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉತ್ತಮ ಭವಿಷ್ಯ ರೂಪುಗೊಳ್ಳಲು ನಿರಂತರ ಪ್ರಯತ್ನ ಅಗತ್ಯ: ಬಟ್ಟೂರ



ಕಾರ್ಯಕ್ರಮದಲ್ಲಿ ಎಸ್ಸೆಸ್ಸೆಲ್ಸಿ, ಪಿಯುಸಿಯಲ್ಲಿ ಶೇ. 85ಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

• **ಕನ್ನಡಪ್ರಭ ವಾರ್ತೆ** ಮುಳಗುಂದ

ಎಸ್ಸೆಸ್ಸೆಲ್ಸಿ, ಪಿಯುಸಿಯಲ್ಲಿ ಉತ್ತಮ ಅಂಕ ಗಳಿಸಿ ಸಾಧನೆ ಮಾಡಿದ ವಿದ್ಯಾರ್ಥಿಗಳು ಇಷ್ಟಕ್ಕೆ ಸುಮ್ಮನಾಗದೇ ಜೀವನ ಉತ್ತಮ ರೀತಿಯಲ್ಲಿ ರೂಪುಗೊಳ್ಳಲು ಕಲಿಕೆಯ ಪ್ರಯತ್ನ ನಿರಂತರವಾಗಿರಲಿ ಎಂದು ಶ್ರೀ.ಬಾ.ಲಿ.ಮ.ಶಿ. ಶಿಕ್ಷಣ ಸಮಿತಿಯ ಚೇರಮನ್ ಎಂ.ಡಿ. ಬಟ್ಟೂರ ತಿಳಿಸಿದರು.ದರು.

ಪಟ್ಟಣದ ಶ್ರೀ.ಬಾ.ಲೀ.ಮ.ಶಿ ಶಿಕ್ಷಣ ಸಮಿತಿಯ ಸಿ.ಬಿ. ಬಡ್ನಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಸೋಮವಾರ ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿಯಲ್ಲಿ ಶೇ. 85ಕ್ಕಿಂತ ಹೆಚ್ಚು ಅಂಕ ಗಳಿಸಿದ ಸಂಸ್ಥೆಯ ವಿದ್ಯಾರ್ಥಿಗಳಿಗೆ ನಡೆದ ಅಭಿನಂದನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ, ಗ್ರಾಮೀಣ ಭಾಗದ ಹಾಗೂ ಸ್ಥಳೀಯ ಮಕ್ಕಳ ಶೈಕ್ಷಣಿಕ ವಿಕಾಸದ ದೃಷ್ಟಿಯಿಂದ ಪಟ್ಟಣದಲ್ಲಿ ನಮ್ಮ ಹಿರಿಯರು ಸಿ.ಬಿ. ಬಡ್ನಿ ಆಂಗ್ಲ ಮಾಧ್ಯಮ ಶಾಲೆಯನ್ನು ತೆರೆದರು ಎಂದರು.

ಶಿಕ್ಷಣ ಸಮಿತಿ ಕಾರ್ಯದರ್ಶಿ ಕೆ.ಎಲ್. ಕರಿಗೌಡರ ಮಾತನಾಡಿ, ಶಿಕ್ಷಣ ಎನ್ನುವುದು ಹುಲಿಯೇ ಹಾಲಿನಂತೆ. ಅದನ್ನು ಕುಡಿದವರು ಘರ್ಜಿಸುತ್ತಾರೆ ಎಂದು ಡಾ. ಬಿ.ಆರ್. ಅಂಬೇಡ್ಕರ್ ಹೇಳಿದ್ದಾರೆ ಎಂದರು.

ಡಾ. ಎಸ್.ಸಿ. ಚವಡಿ ಪ್ರಾಸ್ತಾವಿಕವಾಗಿ ಮಾತನಾಡಿ, ಸಿ.ಬಿ. ಬಡ್ನಿ ಆಂಗ್ಲ ಮಾಧ್ಯಮ ಶಾಲೆಯೂ ಈ ಭಾಗದಲ್ಲಿ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವುದರ ಜತೆಗೆ ವೈಯಕ್ತಿಕ ಕಾಳಜಿ ವಹಿಸುತ್ತದೆ ಎಂದರು. ಪಿ.ಎ. ವಂಟಕರ, ಎನ್.ಆರ್. ದೇಶಪಾಂಡೆ, ಸಿದ್ದು ಕುರ್ತಕೋಟಿ, ಮುರಗೇಶ ಬಡ್ನಿ, ಅದರಗುಂಚಿ, ಪ್ರಾಂಶುಪಾಲರಾದ ಫಾತಿಮಾ, ಸಿಬ್ಬಂದಿ, ವಿದ್ಯಾರ್ಥಿಗಳು ಇದ್ದರು.

ಬಣ್ಣನೆ... ರಾಜ್ಯಮಟ್ಟದ ಕನ್ನಡ ನುಡಿ ಸಡಗರ ಸಾಹಿತ್ಯ ಸಮ್ಮೇಳನದಲ್ಲಿ ರತ್ನಾ ಬದಿ

ಕನ್ನಡದ ಸೊಗಸು, ಸೊಗಡು ಅತ್ಯಂತ ಶ್ರೀಮಂತ

• **ಕನ್ನಡಪ್ರಭ ವಾರ್ತೆ** ಗದಗ

ಕರ್ನಾಟಕದಲ್ಲಿ ಕನ್ನಡ ಮಾತೃಭಾಷೆಯಾಗಿ, ಆಡಳಿತ ಭಾಷೆಯಾಗಿ ಕಟ್ಟುನಿಟ್ಟಾಗಿ ಜಾರಿಗೊಳ್ಳಬೇಕು. ಕನ್ನಡಿಗರಿಗೆ ಕನ್ನಡವೇ ಜೀವಾಳ. ಹಿಂದಿ ಇಂಗ್ಲಿಷ್ ಭಾಷೆ ಶಿಕ್ಷಣ, ಜ್ಞಾನ, ಸಂಪರ್ಕ ಭಾಷೆಯಾಗಿರಲಿ ಎಂದು ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿ ಪುರಸ್ಕೃತೆ, ಸಾಹಿತಿ ರತ್ನಾ ಗಿರೋಸಾ ಬದಿ ತಿಳಿಸಿದರು.

ನಗರದ ಲಯನ್ಸ್ ಭವನದಲ್ಲಿ ರಾಜ್ಯ ಲೇಖಕಿಯರ ಸಂಘ ಜಿಲ್ಲಾ ಘಟಕ ಹಾಗೂ ಶರಣೆ ಅಕ್ಕಮಹಾದೇವಿ ಕದಳಿಶ್ರೀ ವೇದಿಕೆ ಜಿಲ್ಲಾ ಘಟಕ, ಧಾರವಾಡದ ಚೇತನ ಫೌಂಡೇಶನ್, ಬೆಂಗಳೂರಿನ ಗಂಧದ ಗುಡಿ ಕನ್ನಡ ಸಂಘದಿಂದ ನಡೆದ ರಾಜ್ಯಮಟ್ಟದ ಕನ್ನಡ ನುಡಿ ಸಡಗರ ಸಾಹಿತ್ಯ ಸಮ್ಮೇಳನದಲ್ಲಿ ಮಾತನಾಡಿದರು.



ಕಾರ್ಯಕ್ರಮದಲ್ಲಿ ರತ್ನಾ ಗಿರೋಸಾ ಬದಿ ಮಾತನಾಡಿದರು.

ಕನ್ನಡದ ಸೊಗಸು, ಸೊಗಡು ಶ್ರೀಮಂತಗೊಂಡಿದೆ. ಕನ್ನಡ ಕಲಿಯಲು, ಬರೆಯಲು, ಮಾತನಾಡಲು ಹಾಗೂ ಕೇಳಲು ಬಹು ಇಂಪು.

ಇತರ ಭಾಷೆಗಿಂತ ಕನ್ನಡ ಭಾಷೆ ತನ್ನದೇ ಆದ ಇತಿಹಾಸ ಮತ್ತು ಮಹತ್ವವನ್ನು ಹೊಂದಿದೆ. ಅಂತೆಯೇ ನಮ್ಮ ಹಿರಿಯ ಮೇಧಾವಿ ಸಾಹಿತಿಗಳು ರಚಿಸಿದ ಕನ್ನಡ ಕೃತಿಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ಜ್ಞಾನಪೀಠ ಪ್ರಶಸ್ತಿಗಳು ದೊರೆತಿರುವುದು ಕನ್ನಡ ಭಾಷೆಗಿರುವ ಮಹತ್ವ ಮತ್ತು ಶ್ರೀಮಂತಿಕೆಯನ್ನು ಅಭಿವ್ಯಕ್ತಗೊಳಿಸುವುದು ಎಂದರು.

ಈ ವೇಳೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಡಾ. ಶಿವಪ್ಪ ಕುರಿ, ಚೇತನ ಫೌಂಡೇಶನ್ ಅಧ್ಯಕ್ಷ ಚಂದ್ರಶೇಖರ ಮಾಡಲಗೇರಿ, ಸಾಹಿತಿ ಶಿವಶಾಂತ ಬಿಸನಳ್ಳಿ, ಚಂಪಾ ಚಂದ್ರಶೇಖರ ಪಾಟೀಲ, ವಿವೇಕಾನಂದ ಗುಡಿಮನಿ, ಸಾಹಿತಿ ಜಿ.ಎಸ್. ಪಾಟೀಲ, ದೀಪ್ತಿ ಪಾಠಕ, ಪುಷ್ಪಲತಾ ಬಳ್ಳಾರಿ, ಸುಮತಿ ಗದಗಿನಮಠ, ಉಡಚಮ್ಮ ವಾಲ್ಮೀಕಿ, ವಿಜಯಲಕ್ಷ್ಮೀ ಕಮತರ, ಪ್ರೊ. ಸಿದ್ದಲಿಂಗೇಶಸಜ್ಜನಶೆಟ್ಟರ, ಡಾ. ದತ್ತಾತ್ರೇಯ ವೈಕುಂಠೆ, ಪ್ರೊ. ಬಸವರಾಜ ನೆಲಜೇರಿ, ಶರಣಪ್ಪ ಹೊಸಂಗಡಿ, ಸುಜಾತಾ ಪಾಟೀಲ, ಆರ್.ಎಸ್. ತ್ರಿಮಲ್ಲೆ, ಚಂದ್ರಶೇಖರ ಪಾಟೀಲ, ನಿರ್ಮಲಾ ಚಿತ್ತಾಮೂರ, ಶಕುಂತಲಾ ಬಂಡಿ, ರೇಖಾ ರೊಟ್ಟಿ, ಚಂದ್ರಕಲಾ ಸ್ಥಾವರಮಠ, ವಿಜಯಲಕ್ಷ್ಮೀ ಹಳ್ಳಿ, ಸಂಧ್ಯಾ ಕೋಟಿ, ಸುಶೀಲಾ ಕೋಟಿ, ವೀಣಾ ಕಾವೇರಿ, ಮೀನಾಕ್ಷಿ ಕೊರವನವರ, ಬಸವಣ್ಣೆವ್ವ ಹರ್ತಿ, ಕಸ್ತೂರಿ ಕಡಗದ, ಡಾ. ಅರ್ಚನಾ ಪಾಟೀಲ, ಕಾವ್ಯಾ ದಂಡಿನ, ಶಶಿಕಲಾ ಕಮತರ, ಅನುರಾಧಾ ವೈಕುಂಠೆ, ಎ.ಎಸ್. ಮಕಾನದಾರ, ಜಿ. ಚಂದ್ರಶೇಖರ, ಲಕ್ಷ್ಮೀ ಕೋಡಿಹಳ್ಳಿ, ಬಾವುಟ ಬಸವರಾಜ, ಹೇಮಂತದಾಸ್ ಕೆ.ಸಿ. ಸೇರಿದಂತೆ ಸಾಹಿತಿಗಳು, ಗಣ್ಯರು ಇದ್ದರು. ಡಾ. ಜಿ. ಪ್ರೇಮಾ ನಿರೂಪಿಸಿ, ವಂದಿಸಿದರು.

> **ಕನ್ನಡದ ಸೊಗಸು, ಸೊಗಡು ಶ್ರೀಮಂತಗೊಂಡಿದೆ. ಕನ್ನಡ ಕಲಿಯಲು, ಬರೆಯಲು, ಮಾತನಾಡಲು ಹಾಗೂ ಕೇಳಲು ಬಹು ಇಂಪು. ಇತರ ಭಾಷೆಗಿಂತ ಕನ್ನಡ ಭಾಷೆ ತನ್ನದೇ ಆದ ಇತಿಹಾಸ ಮತ್ತು ಮಹತ್ವವನ್ನು ಹೊಂದಿದೆ.**
> • **ರತ್ನಾ ಗಿರೋಸಾ ಬದಿ** ಸಾಹಿತಿ

ವಿದ್ಯಾರ್ಥಿಗಳು ಕಲಿಯುವ ವಯಸ್ಸಿನಲ್ಲಿ ಶ್ರದ್ಧೆ, ಸಂಯಮ, ಶಿಸ್ತು ಮತ್ತು ಸಮಯ ಪರಿಪಾಲನೆಯೊಂದಿಗೆ ಅಭ್ಯಾಸ ಮಾಡಬೇಕು. ಪರಿಶ್ರಮದ ಅಧ್ಯಯನ ಭವಿಷ್ಯದಲ್ಲಿ ಫಲ ನೀಡುವುದು.

• **ಎಸ್.ಜಿ. ಪಲ್ಲೇದ** ನಿವೃತ್ತ ಜಿಲ್ಲಾ ನ್ಯಾಯಾಧೀಶ

ಸುದ್ದಿ ಸಿಂಚನ

ಜಾತ್ರೆಯ ಅವಘಡ ನೋವಿನ ಸಂಗತಿ: ತೋಂಟದ ಶ್ರೀಗಳು



ಗದಗ: ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವದಲ್ಲಿ ಅವಘಡ ಸಂಭವಿಸಿ 15ಕ್ಕೂ ಅಧಿಕ ಜನರು ಗಾಯಗೊಂಡಿರುವುದು ಅತ್ಯಂತ ನೋವಿನ ಸಂಗತಿ. ಗಾಯಗೊಂಡವರು ಬೇಗನೇ ಗುಣಮುಖರಾಗಲೆಂದು ಭಗವಂತನಲ್ಲಿ ಪ್ರಾರ್ಥಿಸಿದ್ದೇವೆ ಎಂದು ತೋಂಟದಾರ್ಯ ಮಠದ ಸಿದ್ದರಾಮ ಶ್ರೀಗಳು ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲಾಸ್ಪತ್ರೆಯಲ್ಲಿ ಗಾಯಾಳುಗಳಿಗೆ ಸರಿಯಾದ ಚಿಕಿತ್ಸೆ ನೀಡಬೇಕೆಂದು ಆಸ್ಪತ್ರೆಯ ವೈದ್ಯರಿಗೆ ಮನವಿ ಮಾಡಿದ್ದೇವೆ. ವೈದ್ಯರು ಗಾಯಾಳುಗಳಿಗೆ ಎಲ್ಲ ರೀತಿಯಿಂದಲೂ ಚಿಕಿತ್ಸೆ ನೀಡುತ್ತಿದ್ದಾರೆ. ಎಲ್ಲರೂ ಗುಣಮುಖರಾಗುತ್ತಿದ್ದು, ಚಿಂತಿಸುವ ಅಗತ್ಯ ಇಲ್ಲ ಎಂದಿದ್ದಾರೆ. ಜಿಲ್ಲಾಧಿಕಾರಿಯವರು ಈ ವಿಷಯದಲ್ಲಿ ವಿಶೇಷ ಆಸಕ್ತಿ ವಹಿಸಿ ಜಿಲ್ಲಾಸ್ಪತ್ರೆಯ ವೈದ್ಯರೊಂದಿಗೆ ಸಮಾಲೋಚಿಸುವುದಲ್ಲದೆ ಚಿಕಿತ್ಸೆಯಲ್ಲಿ ಯಾವುದೇ ಲೋಪಗಳಾಗದಂತೆ ಕಾಳಜಿ ವಹಿಸಲು ಸೂಚಿಸಿದ್ದಾರೆ. ಹೀಗಾಗಿ ಯಾರೂ ಆಂತಕ ಪಡುವ ಅಗತ್ಯ ಇಲ್ಲ. ಜಾತ್ರಾ ಮಹೋತ್ಸವ ಸಮಿತಿಯ ಪದಾಧಿಕಾರಿಗಳು ಮತ್ತು ಆಡಳಿತ ಸಿಬ್ಬಂದಿ ಎಲ್ಲ ಕಡೆಗೂ ಗಮನಹರಿಸಿ ಗಾಯಾಳುಗಳ ಬಗ್ಗೆ ಕಾಳಜಿ ವಹಿಸುತ್ತಿದ್ದಾರೆ. ಸಾಧ್ಯವಿದ್ದ ಎಲ್ಲ ಅನುಕೂಲ ಅವರಿಗೆ ಮಾಡಿಕೊಡಲಾಗುವುದು ಎಂದು ತಿಳಿಸಿದ್ದಾರೆ.

ಮಮತಾ ಆಡಳಿತಕ್ಕೆ ಬೇಸತ್ತಿದ್ದ ಬಂಗಾಳದ ಜನ



ಗದಗ: ಪಶ್ಚಿಮ ಬಂಗಾಳ ಹಾಗೂ ಅಸ್ಸಾಂನಲ್ಲಿ ಬಿಜೆಪಿಗೆ ಅಭೂತಪೂರ್ವ ಗೆಲುವು ಸಿಕ್ಕಿರುವುದು ಸಂತಸ ಸಂಗತಿ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರಡಗಿ ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಮಮತಾ ಬ್ಯಾನರ್ಜಿಯವರ ಅಧಿಕಾರ ಅವಧಿಯಲ್ಲಿ ಆ ರಾಜ್ಯದ ಜನ ಬೇಸತ್ತು ಬಿಜೆಪಿಗೆ ಆಶೀರ್ವಾದ ಮಾಡಿದ್ದಾರೆ. ದೇಶದ ಜನರ ಸುರಕ್ಷತೆ ಕಾಪಾಡುವಲ್ಲಿ ದಿಟ್ಟ ಹೆಜ್ಜೆ ಇಟ್ಟು, ದೇಶದ ಅಭಿವೃದ್ಧಿ ಪಥದಲ್ಲಿ ದೇಶವನ್ನು ಮುನ್ನಡೆಸುತ್ತ ಬಂದಿರುವ ನರೇಂದ್ರ ಮೋದಿ ಅವರ ಕೈ ಬಲಪಡಿಸಲು ಪಶ್ಚಿಮ ಬಂಗಾಳದ ಮತದಾರರು ಬಿಜೆಪಿಗೆ ಆಶೀರ್ವದಿಸಿದ್ದು ಸ್ವಾಗತಾರ್ಹ ಎಂದು ತಿಳಿಸಿದ್ದಾರೆ.

ಹಿಂದೂ ವಿರೋಧಿಗಳಿಗೆ ತಕ್ಕ ಪಾಠ: ವಸಂತ



ಗದಗ: ತಮಿಳುನಾಡು, ಪಶ್ಚಿಮ ಬಂಗಾಳ ಮತ್ತು ಅಸ್ಸಾಂ ರಾಜ್ಯಗಳಲ್ಲಿ ಹಿಂದೂ ವಿರೋಧಿ ನೀತಿಗಳನ್ನು ಅನುಸರಿಸಿಕೊಂಡು ಬಂದಿದ್ದ ಇಂಡಿ ಒಕ್ಕೂಟ ಬೆಂಬಲಿಸುವ ರಾಜಕೀಯ ಪಕ್ಷಗಳಿಗೆ ಮತದಾರರು ತಿರಸ್ಕರಿಸುವ ಮೂಲಕ ತಕ್ಕ ಪಾಠ ಕಲಿಸಿದ್ದಾರೆ ಎಂದು ಬಿಜೆಪಿ ಯುವ ಮುಖಂಡ ವಸಂತ ಪಡಗದ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ಈ ಬಾರಿ ಫಲಿತಾಂಶಗಳು ಎಲ್ಲ ಎಕ್ಸಿಟ್ ಪೋಲ್‌ಗಳ ಬಹುತೇಕ ಅಂದಾಜುಗಳನ್ನು ಮೀರಿದೆ. ತಮಿಳುನಾಡಿನಲ್ಲಿ ಪ್ರಥಮ ಪ್ರಯತ್ನದಲ್ಲಿ ನಟ ವಿಜಯ ಗೆಲುವು ಕೇವಲ ತಮಿಳುನಾಡಿನ ಇತಿಹಾಸ ಅಲ್ಲ ದೇಶದ ಇತಿಹಾಸದಲ್ಲಿ ಇದು ಪ್ರಥಮ ಟಿವಿಕೆ ಗೆಲ್ಲಿಸುವ ಮೂಲಕ ಅಲ್ಲಿನ ಮತದಾರರು ಈ ಬಾರಿ ಮತ್ತೆ ಪ್ರಾದೇಶಿಕ ಪಕ್ಷದತ್ತ ಒಲವು ತೋರಿಸಿದ್ದಾರೆ ಎಂದಿದ್ದಾರೆ.

ಶುಲ್ಕ ಮರುಪಾವತಿ: ಅರ್ಜಿ ಅವಧಿ ವಿಸ್ತರಣೆ

ಗದಗ: 2025- 26ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ- 1ರ ಅಲೆಮಾರಿ, ಅರೆಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ, ಶುಲ್ಕ ಮರುಪಾವತಿ ಯೋಜನೆಯ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಮೇ 16ರ ವರೆಗೆ ವಿಸ್ತರಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾಧಿಕಾರಿ ಮೆಹಬೂಬ್ ತುಂಬರಮಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಬಾರಿ ದ್ರಾಕ್ಷಿಗೆ ಸಿಕ್ತು ಬಂಪರ್ ಬೆಲೆ: ಬೆಳೆಗಾರರು ದಿಲ್‌ಖುಷ್

ರೈತರಿಗೆ ಮುಂಗಡ ಹಣ ನೀಡಿ ಖರೀದಿಸುತ್ತಿರುವ ವ್ಯಾಪಾರಸ್ಥರು



ಡಂಬಳ ಹೋಬಳಿಯ ರಾಮೇನಹಳ್ಳಿ ಗ್ರಾಮದ ರೈತ ಮಹಾದೇವಪ್ಪ ಹಾಲಪ್ಪ ಗುಡಿಸಾಗರ ಅವರ ದ್ರಾಕ್ಷಿ ತೋಟಕ್ಕೆ ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕ ಮಹಮ್ಮದರಫೀಕ ತಾಂಬೋಟಿ ಭೇಟಿ ನೀಡಿ ಪರಿಶೀಲಿಸಿದರು.

ಮುಂಡರಗಿ ತಾಲೂಕಿನಲ್ಲಿ ತೋಟಗಾರಿಕಾ ಬೆಳೆಗಳಿಗೆ ಆದ್ಯತೆ ನೀಡಲಾಗುತ್ತಿದೆ. ದಾಳಿಂಬೆ 4000 ಎಕರೆ, ದ್ರಾಕ್ಷಿ 150 ಎಕರೆ, ಬಾಳೆ 600 ಎಕರೆ ಹೊಂದಿದ್ದು, ಅಲ್ಲದೆ ವಿವಿಧ ತೋಟಗಾರಿಕಾ ಬೆಳೆ ಹೊಂದಲು ಉತ್ತೇಜನ ನೀಡಲಾಗುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಲು ಮುಂದಾಗಬೇಕು.

• **ಮಹಮ್ಮದರಫೀಕ ತಾಂಬೋಟಿ**
ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕರು, ಮುಂಡರಗಿ

• **ರಿಯಾಜಅಹ್ಮದ ದೊಡ್ಡಮನಿ**
ಕನ್ನಡಪ್ರಭ ವಾರ್ತೆ ಡಂಬಳ

ಈ ಬಾರಿ ದ್ರಾಕ್ಷಿ ಬೆಳೆಗೆ ಬಂಗಾರದಂಥ ಬೆಲೆ ಬಂದಿದ್ದು, ವ್ಯಾಪಾರಸ್ಥರು ದ್ರಾಕ್ಷಿ ಬೆಳೆಗಾರರ ತೋಟಗಳಿಗೆ ಭೇಟಿ ನೀಡಿ ಮುಂಗಡ ಹಣ ನೀಡಿ ಖರೀದಿಗೆ ಇಳಿದಿದ್ದಾರೆ.

ಮುಂಡರಗಿ ತಾಲೂಕಿನಲ್ಲಿ ಈ ಬಾರಿ 150ಕ್ಕೂ ಅಧಿಕ ಪ್ರದೇಶದಲ್ಲಿ ದ್ರಾಕ್ಷಿ ಬೆಳೆಯನ್ನು ಬೆಳೆಯಲಾಗಿದೆ. ತಾಲೂಕಿನಲ್ಲಿ ಮುಖ್ಯವಾಗಿ ಸೋನಾಕಾ, ಥಾಮ್ಸನ್, ಸಿಡ್‌ಲೆಸ್, ಮಾಣಿಕ್ ಚಮನ್, ಶರತ್, ಬೆಂಗಳೂರು, ಬ್ಲೂ, ದಿಲ್‌ಖುಷ್ ತಳಿಯ ದ್ರಾಕ್ಷಿಯನ್ನು ಬೆಳೆಯಲಾಗಿದೆ. ಕೆಲವೆಡೆ ದ್ರಾಕ್ಷಿ ಫಸಲನ್ನು ಕಟಾವು ಮಾಡಿದ್ದರೆ, ಇನ್ನೂ ಹಲವೆಡೆ ಕಟಾವು ಹಂತದಲ್ಲಿದೆ.

ಕೆಲವು ತಳಿ ದ್ರಾಕ್ಷಿಗೆ ಭಾರಿ ಬೇಡಿಕೆ ಸೃಷ್ಟಿಯಾಗಿದೆ. ಹೀಗಾಗಿ ದ್ರಾಕ್ಷಿಗೆ ಒಳ್ಳೆಯ ಬೆಲೆ ಬಂದಿದೆ. ಕಳೆದ ಬಾರಿ ಬೆಲೆ ಕುಸಿತದಿಂದ ಕಂಗಾಲಾಗಿದ್ದ ಬೆಳೆಗಾರರಿಗೆ ಈ ಬಾರಿ ದ್ರಾಕ್ಷಿ ಬೆಳೆ ಕೈಹಿಡಿದಿದೆ. ಅದರಲ್ಲೂ ದಿಲ್ ಖುಷ್ ದ್ರಾಕ್ಷಿಗೆ ಮಾರುಕಟ್ಟೆಯಲ್ಲಿ ಉತ್ತಮ ಬೆಲೆ ಸಿಗುತ್ತಿರುವುದರಿಂದ ಬೆಳೆಗಾರರ ಮೊಗದಲ್ಲಿ ಹರ್ಷ ಮೂಡಿದೆ.

₹40 ರಿಂದ ₹150 ದರ: ಸದ್ಯ ಕೆಜಿಗೆ ದಿಲ್‌ಖುಷ್ ತಳಿ ದ್ರಾಕ್ಷಿ ಕೆಜಿಗೆ ₹40, ಶರತ್ ತಳಿಗೆ ₹100, ಸರಿತಾಕೃಷ್ಣ ತಳಿಗೆ ₹120, ರೆಡ್ ಗ್ಲೋಬ್ ₹140ರಿಂದ₹150ರವರೆಗೂ ಮಾರಾಟವಾಗುತ್ತಿದೆ. ಈ ತಳಿಯ ದ್ರಾಕ್ಷಿ ಬೆಳೆಗಾರರ ಬಳಿ ವರ್ತಕರು ತೆರಳಿ ಮುಂಗಡ ಖರೀದಿ ಮಾಡುತ್ತಿದ್ದಾರೆ.

ದ್ರಾಕ್ಷಿಗೆ ಮಾರುಕಟ್ಟೆಯಲ್ಲಿ ಉತ್ತಮ ದರ ಸಿಗುತ್ತಿರುವುದು ಬೆಳೆಗಾರರು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ. ಕಳೆದ ವರ್ಷ ದಿಲ್‌ಖುಷ್ ತಳಿಯ ದ್ರಾಕ್ಷಿ ಕೆಜಿ ₹25ರಿಂದ ₹35ಕ್ಕೆ ಮಾರಾಟವಾಗಿತ್ತು. ಆದರೆಈವರ್ಷಕೆಜಿ₹40ರಂತೆಮಾರಾಟವಾಗುತ್ತಿದೆ. ಸದ್ಯ ಸಿಗುತ್ತಿರುವ ಬೆಲೆ ರೈತರಿಗೆ ಲಾಭವೇ ಹೊರತು ನಷ್ಟವಲ್ಲ ಎನ್ನುತ್ತಾರೆ ದ್ರಾಕ್ಷಿ ಬೆಳೆಗಾರರಾದ ಡಂಬಳ ಹೋಬಳಿಯ ರಾಮೇನಳ್ಳಿ ಗ್ರಾಮದ ಮಹಾದೇವಪ್ಪ ಹಾಲಪ್ಪ ಗುಡಿಸಾಗರ ಅವರು.

ಈ ಬಾರಿ ವರ್ತಕರೇ ಬೆಳೆಗಾರರನ್ನು ಕಂಡು ನಾವೇ ಕಟಾವು ಮಾಡುತ್ತೇವೆ ಎಂದು ಹೇಳುತ್ತಿದ್ದಾರೆ. ಸತತ ಬೆಲೆ ಇಳಿಕೆಯಿಂದ ಕಂಗಾಲಾಗಿದ್ದ ರೈತರು ಈ ಬಾರಿ ಉತ್ತಮ ಬೆಲೆ ಕಂಡು ಸಂತಸಗೊಂಡಿದ್ದಾರೆ.

ರಾಜ್ಯದಲ್ಲಿ ಸುಮಾರು 20 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ದ್ರಾಕ್ಷಿ ಬೆಳೆಯಲಾಗುತ್ತದೆ. ಹೆಚ್ಚಾಗಿ ಏಪ್ರಿಲ್, ಮೇ ಮತ್ತು ಜೂನ್ ತಿಂಗಳಲ್ಲಿ ಅತಿ ಹೆಚ್ಚು ದ್ರಾಕ್ಷಿ ಕಟಾವಿಗೆ ಬರಲಿದೆ. ವಿವಿಧ ತಳಿಯ ದ್ರಾಕ್ಷಿ ಕೆಜಿಗೆ ₹40ರಿಂದ ₹140ರ ವರೆಗೂ ಮಾರಾಟವಾಗುತ್ತಿವೆ.

ಮಹಿಳಾ ಕಾಲೇಜಿನಲ್ಲಿ ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

ಗದಗ: 2026- 27ನೇ ಸಾಲಿನಲ್ಲಿ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ಮಹಿಳಾ ಪಪೂ ಕಾಲೇಜಿನಲ್ಲಿ ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗೆ ಕನ್ನಡ, ಇಂಗ್ಲಿಷ್, ಹಿಂದಿ, ಉರ್ದು, ವಿಜ್ಞಾನ ವಿಭಾಗಕ್ಕೆ(ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ ಹಾಗೂ ಜೀವಶಾಸ್ತ್ರ) ವಾಣಿಜ್ಯ ವಿಭಾಗಕ್ಕೆ(ಕಂಪ್ಯೂಟರ್‌ವಿಜ್ಞಾನ, ಅರ್ಥಶಾಸ್ತ್ರ, ವ್ಯವಹಾರ ಅಧ್ಯಯನ ಮತ್ತು ಲೆಕ್ಕಶಾಸ್ತ್ರ) ಕಲಾ ವಿಭಾಗಕ್ಕೆ(ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ ಮತ್ತು ಸಮಾಜಶಾಸ್ತ್ರ) ವಿಷಯಗಳ ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಮೇ 15ರೊಳಗಾಗಿ ದಾಖಲಾತಿಗಳನ್ನು ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನಾ ಆಜಾದ ಭವನ, ಜಿಲ್ಲಾ ನ್ಯಾಯಾಲಯದ ಎದುರುಗಡೆ, ಗದಗ ಕಚೇರಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಲು ಅಲ್ಪಸಂಖ್ಯಾಂತರ ಕಲ್ಯಾಣ ಇಲಾಖೆಯ ಅಧಿಕಾರಿ ಅಮಿತ ಬಿದರಿ ತಿಳಿಸಿದ್ದಾರೆ.

ಯುವ ಕಾಂಗ್ರೆಸ್ ಸಮಿತಿ ಪದಾಧಿಕಾರಿಗಳ ಸಭೆ

ಕಾಂಗ್ರೆಸ್ ಸಿದ್ಧಾಂತ, ನಿಲುವಿಗೆ ಧ್ವನಿಯಾಗಿ: ಅಕ್ಷಯ ಪಾಟೀಲ



ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಯುವ ಸಮಿತಿ ರಾಜ್ಯ ಪ್ರಧಾನ ಕಾರ್ಯದರ್ಶಿ ಅಕ್ಷಯ ಪಾಟೀಲ ಮಾತನಾಡಿದರು.

• **ಕನ್ನಡಪ್ರಭ ವಾರ್ತೆ** ರೋಣ

ಕಾಂಗ್ರೆಸ್ ಪಕ್ಷದ ತತ್ವ, ಸಿದ್ಧಾಂತ, ನಿಲುವಿಗೆ ಬದ್ಧರಾಗಿ, ದ್ವನಿಯಾಗಿ, ಯಾವುದೇ ಭಿನ್ನಾಭಿಪ್ರಾಯ ಹೊಂದದೇ ಪ್ರಾಮಾಣಿಕವಾಗಿ ಯುವಸಮಿತಿ ಪದಾಧಿಕಾರಿಗಳು, ಕಾರ್ಯಕರ್ತರು ದುಡಿಯಬೇಕು. ಅಂದಾಗ ಪಕ್ಷ ಸಂಘಟಿತವಾಗುವದು ಎಂದು ಯುವ ಕಾಂಗ್ರೆಸ್ ಸಮಿತಿ ರಾಜ್ಯ ಪ್ರಧಾನ ಕಾರ್ಯದರ್ಶಿ ಅಕ್ಷಯ ಪಾಟೀಲ ಹೇಳಿದರು.

ಪಟ್ಟಣದ ಕಾಂಗ್ರೆಸ್ ಕಾರ್ಯಾಲಯದಲ್ಲಿ ಜರುಗಿದ ಯುವಕಾಂಗ್ರೆಸ್ ಸಮಿತಿ ಪದಾಧಿಕಾರಿಗಳ ಸಭೆ ಹಾಗೂ ಎಸ್.ಎಸ್.ಎಲ್.ಸಿ. ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಪಕ್ಷಕ್ಕೆ ಗೌರವ ಕೊಡಬೇಕು. ಪಕ್ಷದ ಪ್ರತಿ ಸಭೆಗೆ ಕಡ್ಡಾಯವಾಗಿ ಹಾಜರಾಗಬೇಕು. ಪಕ್ಷದ ನಿಯಮ ಪಾಲನೆ ಅತೀ ಮುಖ್ಯ ವಾಗಿದೆ. ಕೆಲವರು ಸಭೆಗೆ ಗೈರಾಗುತ್ತಿದ್ದಾರೆ. ಪಕ್ಷದ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂತಹವರ ಪ್ರಯಾಣ ಬಹಳ ದಿನ ಮುಂದುವರಿಯುವುದು ಅಸಾಧ್ಯ. ಆದ್ದರಿಂದ ಯುವ ಸಮಿತಿ ಸದಸ್ಯರು, ಮುಖಂಡರು, ಕಾರ್ಯಕರ್ತರು ಪಕ್ಷದ ತತ್ವ, ಸಿದ್ಧಾಂತಕ್ಕೆ ಬದ್ಧರಾಗಿ ಪಕ್ಷ ಸಂಘಟನೆ ತೊಡಗಬೇಕು ಎಂದರು.

ರಾಷ್ಟ್ರೀಯ ಯುವ ಕಾಂಗ್ರೆಸ್ ಕಾರ್ಯದರ್ಶಿ ವಿವೇಕ ಯಾವಗಲ್ಲ ಮಾತನಾಡಿ, ಯುವಕರು ದೇಶದ ಭವಿಷ್ಯವಾಗಿದ್ದು, ಅವರ ಜೀವನದಲ್ಲಿ ಸಾಧನೆ, ಯಶಸ್ಸು ಹೊಂದಲು ಸನ್ಮಾರ್ಗ ದಲ್ಲಿ ನಡೆಯಬೇಕು. ಪರಿಶ್ರಮದಿಂದ ಬದುಕನ್ನು ರೂಪಿಸಿಕೊಂಡಲ್ಲಿಸಮಾಜಕ್ಕೆಮಾದರಿಯಾಗುವುದು ಎಂದರು.

ಕೃಷ್ಣಗೌಡ ಎಚ್. ಪಾಟೀಲ ಮಾತನಾಡಿ, ವಿದ್ಯಾರ್ಥಿಗಳ ಸಾಧನೆ ಗುರುತಿಸಿ ಗೌರವಿಸಿದಲ್ಲಿ ಅವರ ಸಾಧನಾ ಸಾಮರ್ಥ್ಯಕ್ಕೆ ಮತ್ತಷ್ಟು ಸ್ಫೂರ್ತಿ ಸಿಗುತ್ತದೆ.

ಪಕ್ಷದ ಪ್ರತಿ ಸಭೆಗ ಕಡ್ಡಾಯವಾಗಿ ಹಾಜರಾಗಬೇಕು. ಪಕ್ಷದ ನಿಯಮ ಪಾಲನೆ ಅತೀ ಮುಖ್ಯ ವಾಗಿದೆ. ಕೆಲವರು ಸಭೆಗೆ ಗೈರಾಗುತ್ತಿದ್ದಾರೆ. ಪಕ್ಷದ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂತಹವರ ಪ್ರಯಾಣ ಬಹಳ ದಿನ ಮುಂದುವರಿಯುವದು ಅಸಾಧ್ಯ.

• **ಅಕ್ಷಯ ಪಾಟೀಲ**
ಯುವ ಕಾಂಗ್ರೆಸ್ ಸಮಿತಿ ರಾಜ್ಯ ಪ್ರಧಾನ ಕಾರ್ಯದರ್ಶಿ

ಜೊತೆಗೆ ವಿದ್ಯಾರ್ಥಿಗಳೊಂದಿಗೆ ಕಾಂಗ್ರೆಸ್ ಪಕ್ಷ ಸದಾ ಜೊತೆಗಿದ್ದು, ಅಗತ್ಯ ಮಾರ್ಗದರ್ಶನ, ಸಹಾಯ ಮಾಡುವಲ್ಲಿ ಸಿದ್ಧವಿದೆ ಎಂಬುದನ್ನು ತಿಳಿಸುವ ಉದ್ದೇಶ ದಿಂದ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ರೋಣ ಹಾಗೂ ಗಜೇಂದ್ರಗಡ ತಾಲೂಕಿನ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಈ ವೇಳೆ ಯುವ ಕಾಂಗ್ರೆಸ್ ರಾಜ್ಯ ಕಾರ್ಯದರ್ಶಿ ಉದಯಗೌಡ ವೀರಣಗೌಡ್ರ, ಕೀರ್ತಿರಾಜ, ರವಿಕಿರಣ, ಅಹ್ಮದ ಖಾಜಿ, ರೋಣ ಮತಕ್ಷೇತ್ರ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಮುತ್ತು ನವಲಗುಂದ, ವಾಣಿ ಹಿರೇಮಠ, ಮಹೇಶ ಕಳಸಣ್ಣವರ, ವೀರೇಶ ಚುಳಕಿ, ಗೋಪಿ ರಾಯನಗೌಡ್ರ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು. ಬಸವರಾಜ ಹೊಸಳ್ಳಿ ನಿರೂಪಿಸಿದರು.

ವಿದ್ಯಾರ್ಥಿಗಳಿಗೆ ಶಿಸ್ತು, ಸಂಯಮ ಅಗತ್ಯ

ಆಧ್ಯಾತ್ಮಿಕ, ಶೈಕ್ಷಣಿಕ ಚಿಂತನ ಮಾಲಿಕೆಯಲ್ಲಿ ನಿವೃತ್ತ ನ್ಯಾಯಾಧೀಶ ಎಸ್.ಜಿ. ಪಲ್ಲೇದ



ಕಾರ್ಯಕ್ರಮದಲ್ಲಿ ನಿವೃತ್ತ ನ್ಯಾಯಾಧೀಶ ಎಸ್.ಜಿ. ಪಲ್ಲೇದ ಮಾತನಾಡಿದರು. ನೂರಾರು ವಿದ್ಯಾರ್ಥಿಗಳು ಇದ್ದರು.

• **ಕನ್ನಡಪ್ರಭ ವಾರ್ತೆ** ಗದಗ

ಶಿಕ್ಷಣ ವ್ಯಕ್ತಿತ್ವ ವಿಕಸನಗೊಳಿಸುವ ಮೂಲಕ ವ್ಯಕ್ತಿಯನ್ನು ಉನ್ನತ ಸ್ಥಾನಕ್ಕೇರಿಸುವ ಅದ್ಭುತ ಶಕ್ತಿ ಶಿಕ್ಷಣಕ್ಕಿದೆ ಎಂದು ನಿವೃತ್ತ ಜಿಲ್ಲಾ ನ್ಯಾಯಾಧೀಶ ಎಸ್.ಜಿ. ಪಲ್ಲೇದ ತಿಳಿಸಿದರು.

ನಗರದ ಶಿಕ್ಷಣ ಪ್ರೇಮಿ ಬಿ.ಜಿ. ಅಣ್ಣಿಗೇರಿ ಆಶ್ರಮದಲ್ಲಿ ಮಂಗಳವಾರ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ನಡೆದ ಆಧ್ಯಾತ್ಮಿಕ ಮತ್ತು ಶೈಕ್ಷಣಿಕ ಚಿಂತನ ಮಾಲಿಕೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ವಿದ್ಯಾರ್ಥಿಗಳು ಕಲಿಯುವ ವಯಸ್ಸಿನಲ್ಲಿ ಶ್ರದ್ಧೆ, ಸಂಯಮ, ಶಿಸ್ತು ಮತ್ತು ಸಮಯ ಪರಿಪಾಲನೆಯೊಂದಿಗೆ ಅಭ್ಯಾಸ ಮಾಡಬೇಕು. ಪರಿಶ್ರಮದ ಅಧ್ಯಯನ ಭವಿಷ್ಯದಲ್ಲಿ ಫಲ ನೀಡುವುದು ಎಂದರು.

ಡಿಡಿಪಿಐ ಆರ್.ಎಸ್. ಬುರಡಿ ಮಾತನಾಡಿ, ಈ ಸಲ ಎಸ್ಸೆಸ್ಸೆಲ್ಸಿ ಪರೀಕ್ಷಾ ಫಲಿತಾಂಶವು ಅತ್ಯುತ್ತಮವಾಗಿ ಬರಲು ಶಿಕ್ಷಕರಪರಿಶ್ರಮವಿದ್ಯಾರ್ಥಿಗಳನಿರಂತರಓದುವಿಕೆಯಿಂದಾಗಿ ಸಾಕಾರಗೊಂಡಿದೆ. ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮವು ಗದಗ ಪರಿಸರದ ಶೈಕ್ಷಣಿಕ ಅಭಿವೃದ್ಧಿಗೆ ತನ್ನದೇ ಆದ ಕೊಡುಗೆ ನೀಡಿದೆ ಎಂದರು.

ನಿವೃತ್ತ ಪ್ರಾ. ಡಾ. ಉಮೇಶಪುರದ, ಜಿಮ್ಸ್ ವೈದ್ಯಾಧಿಕಾರಿ ಡಾ. ಅರವಿಂದ, ನಗರಸಭೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಲಕ್ಷ್ಮಣ ಜೋಗದಂಡಕರ ಹಾಗೂ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ ಮಾತನಾಡಿದರು.

ಮಕ್ಕಳಿಗೆ ದಾಸೋಹ ಸೇವೆ ವಹಿಸಿಕೊಂಡಿದ್ದ ಪ್ರಸನ್ನ ಅರಳಿ ಹಾಗೂ ಅತಿಥಿಗಳನ್ನು ಸನ್ಮಾನಿಸಲಾಯಿತು. ಸಿದ್ದಣ್ಣ ಕವಲೂರ, ಆಂಜನೇಯ ಕಟಗಿ, ತೋಂಟೇಶ ವೀರಲಿಂಗಯ್ಯನಮಠ, ರವಿ ದಂಡಿನ, ಡಾ. ಚನ್ನಪ್ಪಗೌಡ್ರ, ಡಾ. ಬಸಯ್ಯ ಬೆಳ್ಳೇರಿಮಠ, ಸುಭಾಷ್ಚಂದ್ರ ಬೆಟ್ಟದೂರ, ಗುರುರಾಜ ಅಣ್ಣಿಗೇರಿ, ಆಶ್ರಮದ ಶಿಕ್ಷಕರಾದ ರೇಣುಕಾ ಕೆಲೂರ, ಭೀಮಪ್ಪ ಇಬ್ರಾಂಪೂರ, ಪ್ರಸನ್ನಕುಮಾರ ಗುತ್ತಿ, ಗುರುರಾಜ ಅಣ್ಣಿಗೇರಿ, ಜ್ಯೋತಿ ವಡಗೇರಿ, ಹುಲಿಗೆಮ್ಮ ಹಂಚಿನಾಳ, ಸಂತೋಷ ಹಾದಿ, ದೀಪಾ, ನೇಹಾ ಖಟವಟೆ, ತೇಜಸ್ವಿನಿ ಕುರ್ತಕೋಟಿ ಇದ್ದರು. ಮಂಜುಳಾ ತುಮ್ಮರಮಟ್ಟಿ ಸ್ವಾಗತಿಸಿ, ನಿರೂಪಿಸಿದರು. ಶಿವಪ್ಪ ಕಟ್ಟಿ ವಂದಿಸಿದರು.

ವೈಭವದ ದ್ಯಾಮಮ್ಮ ದುರ್ಗಾದೇವಿ ಜಾತ್ರೆ

18 ವರ್ಷದ ಬಳಿಕ ನರಗುಂದ ತಾಲೂಕಿನ ಬೆನಕನಕೊಪ್ಪ ಗ್ರಾಮದಲ್ಲಿ ಆಚರಣೆ

• **ಕನ್ನಡಪ್ರಭ ವಾರ್ತೆ** ನರಗುಂದ

ತಾಲೂಕಿನ ಬೆನಕನಕೊಪ್ಪ ಗ್ರಾಮದಲ್ಲಿ ಮಂಗಳವಾರ ಶಕ್ತಿದೇವತೆ ದ್ಯಾಮಮ್ಮ ದುರ್ಗಾದೇವಿ ಜಾತ್ರೆ ಸಂಭ್ರಮದಿಂದ ನಡೆಯಿತು.

ಜಾತ್ರೆ ನಿಮಿತ್ತ ಗ್ರಾಮದಲ್ಲಿ ಮನೆಯಲ್ಲಿ ಅಡುಗೆ ಮಾಡುವಂತಿಲ್ಲ, ಗ್ರಾಮಸ್ಥರು ಪಾದರಕ್ಷೆ ಧರಿಸದೇ ಜಾತ್ರೆ ಮಾಡಿದ್ದು ವಿಶೇಷವಾಗಿತ್ತು. ವಾದ್ಯ, ಕುಂಭಮೇಳದೊಂದಿಗೆ ಗ್ರಾಮದಲ್ಲಿ ಪಲ್ಲಕ್ಕಿ ಮೆರವಣಿಗೆ ನಡೆಯಿತು. ಈ ವೇಳೆ ಭಂಡಾರ ಎರಚಲಾಯಿತು. ಯುವಕರ ನೃತ್ಯ ಮಾಡಿ ಸಂಭ್ರಮಿಸಿದರು.

18 ವರ್ಷಗಳ ನಂತರ ಶಕ್ತಿ ದೇವತೆಯ ಜಾತ್ರೆಯನ್ನು ಐದು ದಿನಗಳ ಕಾಲ ಗ್ರಾಮಸ್ಥರು ನಡೆಸುತ್ತಿದ್ದಾರೆ. ಗ್ರಾಮದೇವತೆಯ ಜಾತ್ರೆಗೆ 50 ಕ್ವಿಂಟಲ್ ಭಂಡಾರ ತರಿಸಲಾಗಿತ್ತು. ಮೆರವಣಿಗೆ ಉದ್ದಕ್ಕೂ ಯುವಕರು, ಮಹಿಳೆಯರು ಭಂಡಾರ ಎರಚಿದರು.



ಬೆನಕನಕೊಪ್ಪ ಗ್ರಾಮಸ್ಥರು ಗ್ರಾಮದೇವಿ ಜಾತ್ರೆಯನ್ನು ಸಂಭ್ರಮದಿಂದ ನೆರವೇರಿಸಿದರು.

ಗ್ರಾಮದ ಹಿರಿಯರಾದ ದೇಸಾಯಿಗೌಡ ಪಾಟೀಲ ಮಾತನಾಡಿ, ಗ್ರಾಮದಲ್ಲಿ ಗ್ರಾಮದೇವತೆ ಜಾತ್ರೆ ಇರುವ ಕಾರಣ ಹೆಣ್ಣುಮಕ್ಕಳು ತವರು ಮನೆ ಬರುತ್ತಾರೆ. ಅವರು ಯಾವುದೇ ಊರಲ್ಲಿದ್ದರೂ ಜಾತ್ರೆಗೆ ಹಾಜರಾಗ್ತಾರೆ. ಹೆಣ್ಣುಮಕ್ಕಳು ಗ್ರಾಮದೇವತೆಗೆ ಪೂಜೆ ಸಲ್ಲಿಸಿ ಉಡಿ ತುಂಬುತ್ತಾರೆ. ಭಕ್ತರ ಇಷ್ಟಾರ್ಥ ಈಡೇರಿಸುವ ಶಕ್ತಿದೇವತೆಗೆ ಪೂಜೆ ಸಲ್ಲಿಸಿ ಪ್ರಾರ್ಥನೆ ಮಾಡುತ್ತಾರೆ ಎಂದರು.

ವಿದ್ಯಾರ್ಥಿಗಳಿಗೆ ಶಾಸಕ ಡಾ. ಲಮಾಣಿ ಪಾಠ!

ಲಕ್ಷ್ಮೇಶ್ವರದಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ವಿಷಯ ಬೋಧನೆ

• **ಕನ್ನಡಪ್ರಭ ವಾರ್ತೆ** ಲಕ್ಷ್ಮೇಶ್ವರ

ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ವಿಜ್ಞಾನ ವಿಷಯದಲ್ಲಿನ ಹೃದಯದ ಕಾರ್ಯ, ರಕ್ತದ ಪರಿಚಲನೆ, ರಕ್ತದ ಗುಂಪುಗಳು ದೇಹದ ವಿವಿಧ ಅಂಗಗಳ ಕುರಿತು ಶಾಸಕ ಡಾ. ಚಂದ್ರು ಲಮಾಣಿ ಅವರು ಪಾಠ ಮಾಡುವ ಮೂಲಕ ಗಮನ ಸೆಳೆದರು.

ಮಂಗಳವಾರ ಪಟ್ಟಣದ ಉಮಾ ವಿದ್ಯಾಲಯದಲ್ಲಿ ತಾಲೂಕಿನ ಎಸ್‌ಎಸ್ ಎಲ್‌ಸಿ ವಿದ್ಯಾರ್ಥಿಗಳಿಗೆ ಶಾಸಕ ಡಾ. ಚಂದ್ರು ಅಭಿಮಾನಿ ಬಳಗದ ವತಿಯಿಂದ ಹಮ್ಮಿಕೊಂಡಿರುವ ಉಚಿತ ಬೇಸಿಗೆ ಶಿಬಿರದಲ್ಲಿ ಪಾಠ ಮಾಡಿದರು.

ರಕ್ತದ ವಿಧಗಳು, ರಕ್ತದ ಬಣ್ಣ, ರಕ್ತದಲ್ಲಿನ ವಿವಿಧ ಅಂಶಗಳು, ಹೃದಯದ ಕಾರ್ಯ, ಅಪದಮನಿ, ಅಭಿದಮನಿ, ಹೃದಯದ ಬಡಿತ ಎಷ್ಟಿರಬೇಕು, ಆರೋಗ್ಯವಂತ ಮನುಷ್ಯನ ಗುಣಲಕ್ಷಣಗಳ ಕುರಿತು ಎಸ್ ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಒಂದು ಗಂಟೆಗಳ ಕಾಲ ಬೋಧನೆ ಮಾಡಿದರು.



ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಶಾಸಕ ಡಾ. ಚಂದ್ರು ಲಮಾಣಿ ಪಾಠ ಮಾಡಿದರು.

ವೈದ್ಯರಾಗಿರುವ ಶಾಸಕ ಡಾ. ಚಂದ್ರು ಲಮಾಣಿ ಅವರು ವಿಜ್ಞಾನ ಹಾಗೂ ವೈದ್ಯಕೀಯ ವಿಜ್ಞಾನದ ವಿಷಯದಲ್ಲಿನ ತಮ್ಮ ಜ್ಞಾನವನ್ನು ಮಕ್ಕಳಿಗೆ ತಿಳಿ ಹೇಳುವ ಕಾರ್ಯ ಮಾಡಿದ್ದು ಗಮನಾರ್ಹವಾಗಿತ್ತು.

ಯಾವ ಶಿಕ್ಷಕರಿಗೂ ಕಡಿಮೆ ಇಲ್ಲದಂತೆ ಪಾಠ ಮಾಡಿದ ಶಾಸಕರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತವಾಗಿದೆ.

ಈ ವೇಳೆ ಬಿಇಒ ನಾಣಕಿ ನಾಯ್ಕ ಮಾತನಾಡಿದರು. ಪುರಸಭೆಯ ಉಮಾ ವಿದ್ಯಾಲಯದ ಮುಖ್ಯೋಪಾಧ್ಯಾಯ ಮಂಜುನಾಥ ಸಂಗನಪೇಟೆ ಹಾಗೂ ತಾಲೂಕಿನ ವಿವಿಧ ಭಾಗದ ಸುಮಾರು 350ಕ್ಕೂ ಹೆಚ್ಚು ವಿದ್ಯಾರ್ಥಿಗಳು ಬೇಸಿಗೆ ಶಿಬಿರದ ಲಾಭ ಪಡೆದುಕೊಂಡರು.

ಖಂಡನೆ.... ಈ ಕುರಿತು ಜನಪ್ರತಿನಿಧಿಗಳು ಧ್ವನಿ ಎತ್ತಲಿ: ಶಾಂತಲಿಂಗ ಶ್ರೀ

ರೈಲ್ವೆ ಪರೀಕ್ಷೆಯಲ್ಲಿ ಕನ್ನಡ ಕಡೆಗಣನೆ ಸರಿಯಲ್ಲ

• **ಕನ್ನಡಪ್ರಭ ವಾರ್ತೆ** ನರಗುಂದ

ರೈಲ್ವೆ ಪರೀಕ್ಷಾ ನೇಮಕಾತಿಯಲ್ಲಿ ಕನ್ನಡವನ್ನು ಕಡೆಗಣಿಸುತ್ತಿರುವುದು ಕನ್ನಡಕ್ಕೆ ಮಾಡುತ್ತಿರುವ ಬಹುದೊಡ್ಡ ಅಪಮಾನವಾಗಿದೆ ಎಂದು ಭೈರನಹಟ್ಟಿ ದೊರೆಸ್ವಾಮಿ ವಿರಕ್ತಮಠದ ಶಾಂತಲಿಂಗ ಶ್ರೀಗಳು ತಿಳಿಸಿದರು.

ತಾಲೂಕಿನ ಭೈರನಹಟ್ಟಿ ಗ್ರಾಮದ ದೊರೆಸ್ವಾಮಿ ವಿರಕ್ತಮಠದಲ್ಲಿ ಕನ್ನಡ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ಹಾಗೂ ದೊರೆಸ್ವಾಮಿ ವಿವಿಧೋದ್ದೇಶ ಟ್ರಸ್ಟ್ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ ಹಾಗೂ ನಾದಬ್ರಹ್ಮಾನಂದಸ್ವಾಮಿಗಳ ಜಯಂತ್ಯುತ್ಸವ ಸಮಾರಂಭದಲ್ಲಿ ಮಾತನಾಡಿದರು.

ಇತ್ತೀಚೆಗೆ ನೈರುತ್ಯ ರೈಲ್ವೆ ಇಲಾಖೆಯು ಹೊರಡಿಸಿರುವ ಪರೀಕ್ಷಾ ಸುತ್ತೋಲೆಯಲ್ಲಿ ಪ್ರಾದೇಶಿಕ ಭಾಷೆಯಾದ ಕನ್ನಡ ಬಳಸದೆ ಕೇವಲ ಹಿಂದಿ- ಇಂಗ್ಲಿಷ್ ಭಾಷೆಯಲ್ಲಿ ಮಾತ್ರ ಸುತ್ತೋಲೆ ಹೊರಡಿಸಿರುವ ಕೇಂದ್ರ ಸರ್ಕಾರ ಪ್ರಾದೇಶಿಕ ಭಾಷೆಗಳನ್ನು ಹತ್ತಿಕ್ಕುವ ಪ್ರಯತ್ನವನ್ನು ನಿರಂತರವಾಗಿ ಮಾಡುತ್ತಿದೆ.

ಈ ಬಗ್ಗೆ ಸಾಕಷ್ಟು ಹೋರಾಟ, ಚಳವಳಿಗಳನ್ನು ಮಾಡಿದರೂ ಪರೀಕ್ಷೆಯಲ್ಲಿ ಕನ್ನಡವನ್ನು ಬಳಕೆ ಮಾಡದಿರುವುದು ವಿಪರ್ಯಾಸದ ಸಂಗತಿ ಎಂದರು.



ಭೈರನಹಟ್ಟಿಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ನಡೆಯಿತು.

ಕರ್ನಾಟಕದಲ್ಲಿ ಕನ್ನಡ ಅಧಿಕೃತ ಭಾಷೆ. ರಾಜ್ಯ ಸರ್ಕಾರದ ಎಲ್ಲ ಇಲಾಖೆಗಳಲ್ಲಿ ಕನ್ನಡ ಅನುಷ್ಠಾನವನ್ನು ಕಡ್ಡಾಯಗೊಳಿಸಿದೆ. ಆದರೂ ನೈಋತ್ಯ ರೈಲ್ವೆಯು ಪರೀಕ್ಷಾ ನೇಮಕಾತಿಯಲ್ಲಿ ಕರ್ನಾಟಕದಲ್ಲಿ ಸಂಪೂರ್ಣವಾಗಿಕನ್ನಡವನ್ನುಕಡೆಗಣಿಸುತ್ತಿದೆ. ಈ ಕುರಿತು ಮುಖ್ಯಮಂತ್ರಿಗಳು ಹಾಗೂ ರಾಜ್ಯದ 28 ಸಂಸದರು, ರಾಜ್ಯಸಭಾ ಸದಸ್ಯರು ಮತ್ತು ರೈಲ್ವೆ ಇಲಾಖೆಯ ರಾಜ್ಯ ಖಾತೆ ಸಚಿವ ವಿ. ಸೋಮಣ್ಣನವರು ಮೌನ ಮುರಿದು ಕನ್ನಡಕ್ಕಾಗುತ್ತಿರುವ ಅನ್ಯಾಯವನ್ನು ತಡೆಯಬೇಕು ಎಂದು ಮನವಿ ಮಾಡಿದರು.

ಕಂಠಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಚೆನ್ನಬಸಪ್ಪ ಕಂಠಿ ಮಾತನಾಡಿ, ಕನ್ನಡ ಸಾಹಿತ್ಯ, ಕಲೆ, ಜಾನಪದ ಸಂಸ್ಕೃತಿ ಸಂವರ್ಧನೆಯ ಉದ್ದೇಶದೊಂದಿಗೆ ಸ್ಥಾಪಿತವಾದ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆ ಕನ್ನಡ ಸಾಹಿತ್ಯ ಪರಿಷತ್ತು ಕನ್ನಡ ಉಳಿಸುವಲ್ಲಿ ನಿರಂತರವಾಗಿ ಶ್ರಮಿಸುತ್ತಿದೆ ಎಂದರು.

ಈ ಸಂದರ್ಭದಲ್ಲಿ 2026ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ ಅಲೆಮಾರಿ ಜನಾಂಗದ ನೀಲಾವತಿ ಯಣ್ಣಿ ಹಾಗೂ ಹತ್ತನೆ ತರಗತಿ ವಾರ್ಷಿಕ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಭೈರನಹಟ್ಟಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿಯರನ್ನು ಶ್ರೀಮಠದಿಂದ ಪ್ರತಿಭಾ ಪುರಸ್ಕಾರ ನೀಡಿ ಸತ್ಕರಿಸಲಾಯಿತು.

ಬಿಆರ್‌ಸಿ ಅಧಿಕಾರಿಗಳಾದ ಬಿ.ಆರ್. ರಾಯನಗೌಡ್ರ, ಸಿ.ಎಫ್. ಕುರಿ, ಮುಖ್ಯ ಶಿಕ್ಷಕ ಎಂ.ಡಿ. ಸಕ್ಕರಿ, ಜೆ.ಆರ್. ಕದಂ, ಸಂಗಪ್ಪ ಪೂಜಾರ, ಪ್ರೊ. ಆರ್.ಬಿ. ಚಿನಿವಾಲರ, ಅಮರೇಶ ತೆಗ್ಗಿಮನಿ ಪ್ರಮುಖರು ಇದ್ದರು. ಪ್ರೊ. ಆರ್.ಕೆ. ಐನಾಪೂರ ಕಾರ್ಯಕ್ರಮ ನಿರ್ವಹಿಸಿದರು. ಮಹಾಂತೇಶ ಹಿರೇಮಠ ಸ್ವಾಗತಿಸಿ, ವಂದಿಸಿದರು.

ಇತ್ತೀಚೆಗೆ ನೈರುತ್ಯ ರೈಲ್ವೆ ಇಲಾಖೆಯು ಹೊರಡಿಸಿರುವ ಪರೀಕ್ಷಾ ಸುತ್ತೋಲೆಯಲ್ಲಿ ಪ್ರಾದೇಶಿಕ ಭಾಷೆಯಾದ ಕನ್ನಡ ಬಳಸದೆ ಕೇವಲ ಹಿಂದಿ- ಇಂಗ್ಲಿಷ್ ಭಾಷೆಯಲ್ಲಿ ಮಾತ್ರ ಸುತ್ತೋಲೆ ಹೊರಡಿಸಿರುವ ಕೇಂದ್ರ ಸರ್ಕಾರ ಪ್ರಾದೇಶಿಕ ಭಾಷೆಗಳನ್ನು ಹತ್ತಿಕ್ಕುವ ಪ್ರಯತ್ನವನ್ನು ನಿರಂತರವಾಗಿ ಮಾಡುತ್ತಿದೆ.

• **ಶಾಂತಲಿಂಗ ಶ್ರೀಗಳು**

ಆಕ್ಷೇಪಣೆ ಸಲ್ಲಿಸಲು ಸೂಚನೆ

ಮುಂಡರಗಿ: 2024- 25ರ ಮುಂಗಾರು ಮತ್ತು ಹಿಂಗಾರು ಹಂಗಾಮಿನ ತಿರಸ್ಕೃತಗೊಂಡ ಬೆಳೆವಿಮೆ ಪ್ರಸ್ತಾವನೆಗಳಿಗೆ ಆಕ್ಷೇಪಣೆ ಆಹ್ವಾನಿಸಲಾಗಿದೆ. ಫಸಲ್ ಬಿಮಾ ಯೋಜನೆ ಅಡಿ ಬೆಳೆ ಸಮೀಕ್ಷೆಯೊಂದಿಗೆ ಹೊಂದಾಣಿಕೆಯಾಗದ ತಾಲೂಕಿನ ಮುಂಗಾರು ಹಂಗಾಮಿನ 408, ಹಿಂಗಾರು ಹಂಗಾಮಿನ 181 ಹಾಗೂ ಬೇಸಿಗೆ ಹಂಗಾಮಿನ 4 ಒಟ್ಟಾರೆ 593 ಬೆಳೆವಿಮೆ ಪ್ರಸ್ತಾವನೆಗಳನ್ನು ವಿಮಾ ಸಂಸ್ಥೆಯವರು ತಿರಸ್ಕರಿಸಿದ್ದಾರೆ. ಈ ಪ್ರಸ್ತಾವನೆಗಳಿಗೆ ಆಕ್ಷೇಪಣೆ ಆಹ್ವಾನಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮುಂಡರಗಿಯ ಕೃಷಿ ಅಧಿಕಾರಿಗಳು ರೈತ ಸಂಪರ್ಕ ಕೇಂದ್ರ ಅಥವಾ ಡಂಬಳ ಅಥವಾ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರು ಅಥವಾ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಲು ಸಹಾಯಕ ಕೃಷಿ ನಿರ್ದೇಶಕ ಪ್ರಾಣೇಶ ತಿಳಿಸಿದ್ದಾರೆ.

ಕಸಾಪ ಕನ್ನಡಿಗರ ಹೆಮ್ಮೆ

ಸಂಸ್ಥಾಪನಾ ದಿನಾಚರಣೆಯಲ್ಲಿ ಎಚ್.ಎನ್. ನಾಯ್ಕ



ಕಾರ್ಯಕ್ರಮವನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ ಉದ್ಘಾಟಿಸಿದರು.

• **ಕನ್ನಡಪ್ರಭ ವಾರ್ತೆ** ಲಕ್ಷ್ಮೇಶ್ವರ

ಕನ್ನಡ ನಾಡಿನ ಅಸ್ಮಿತೆಯ ಪ್ರತೀಕವೇ ಕನ್ನಡ ಸಾಹಿತ್ಯ ಪರಿಷತ್ತು. ಕನ್ನಡ ನಾಡು- ನುಡಿಯ ಸಂರಕ್ಷಣೆ ಮತ್ತು ಕನ್ನಡ ಭಾಷೆಗಾಗಿ ಶ್ರಮಿಸಲು ಕಟ್ಟಲಾಗಿರುವ ಸಮಸ್ತ ಕನ್ನಡಿಗರ ಏಕೈಕಪ್ರಾತಿನಿಧಿಕಸಂಸ್ಥೆಯಾಗಿದೆಎಂದುಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ ತಿಳಿಸಿದರು.

ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದ ಸಭಾಭವನದಲ್ಲಿ ಮಂಗಳವಾರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ತಾಲೂಕು ಘಟಕದ ಸಂಘಟನಾ ಕಾರ್ಯದರ್ಶಿ ನಾಗರಾಜ ಮಜ್ಜಿಗುಡ್ಡ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ 1915ರ ಮೇ 5ರಂದು ಮೈಸೂರು ಅರಸರಾಗಿದ್ದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್‌ಅವರಿಂದ ಸ್ಥಾಪಿಸಲ್ಪಟ್ಟಿತ್ತು. ಆರಂಭದ ವೇಳೆ ಕರ್ನಾಟಕ ಸಾಹಿತ್ಯ ಪರಿಷತ್ ಎಂದು ನಾಮಕರಣಗೊಂಡರೂ ಮುಂದೆ 1935ರಲ್ಲಿ ಕನ್ನಡ ಸಾಹಿತ್ಯ ಪರಿಷತ್ ಎಂದು ಮರುನಾಮಕರಣಗೊಂಡಿತು ಎಂದರು.

ಲಕ್ಷ್ಮೇಶ್ವರ ಪೌರಸೇವಾ ಸಾಧಕ ಬಸವಣ್ಣೆಪ್ಪ ನಂದೆಣ್ಣವರ ಮಾತನಾಡಿ, ಯಾವುದೇ ಪ್ರಶಸ್ತಿ, ಗೌರವ ಬಯಸದೇ ನಾಲ್ಕು ದಶಕಗಳ ಕಾಲ ಲಕ್ಷ್ಮೇಶ್ವರದ ಪೌರಸೇವೆ ಮಾಡಿದ ನಮ್ಮಂತವರನ್ನು ಗುರುತಿಸಿ ಗೌರವಿಸಿದ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯ ಸ್ತುತ್ಯಾರ್ಹ ಎಂದರು.

ಶಿಕ್ಷಕ ಎಸ್.ಎಫ್. ಆದಿ ಅವರು, ಕನ್ನಡ ಸಾಹಿತ್ಯ ಪರಿಷತ್ತು ಕನ್ನಡದ ಶ್ರೀಮಂತ ಪರಂಪರೆಯನ್ನು ಮತ್ತಷ್ಟು ಸಮೃದ್ಧಗೊಳಿಸುತ್ತಿದೆ. ಆದರಲ್ಲೂ ಗದಗ ಜಿಲ್ಲಾ ಘಟಕ ಹಾಗೂ ಲಕ್ಷ್ಮೇಶ್ವರ ತಾಲೂಕ ಘಟಕಗಳು ರಚನಾತ್ಮಕ ಕಾರ್ಯಕ್ರಮಗಳ ಮೂಲಕ ಅತ್ಯಂತ ಕ್ರಿಯಾಶೀಲವಾಗಿವೆ ಎಂದರು.

■ **ತಿರುಳ್ಗನ್ನಡ ನೆಲವಾದ ಪುಲಿಗೆರೆ ಅಂದರೆ ಈಗಿನ ಲಕ್ಷ್ಮೇಶ್ವರ ಪ್ರಾಚೀನ ಕಾಲದಿಂದಲೂ ಕನ್ನಡ, ಕನ್ನಡತನದ ಜಾಗೃತಿಯ ನಾಡು: ಈಶ್ವರ ಮೆಡ್ಲೇರಿ**

ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಈಶ್ವರ ಮೆಡ್ಲೇರಿ ಪ್ರಾಸ್ತಾವಿಕವಾಗಿ ಮಾತನಾಡಿ, ತಿರುಳ್ಗನ್ನಡ ನೆಲವಾದ ಪುಲಿಗೆರೆ ಅಂದರೆ ಈಗಿನ ಲಕ್ಷ್ಮೇಶ್ವರ ಪ್ರಾಚೀನ ಕಾಲದಿಂದಲೂ ಕನ್ನಡ, ಕನ್ನಡತನದ ಜಾಗೃತಿಯ ನಾಡು. ಹಾಗಾಗಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ರಚನಾತ್ಮಕ ಕಾರ್ಯಕ್ರಮ ನಿರಂತರವಾಗಿ ಸಂಘಟಿಸಲು ಸಾಧ್ಯವಾಗುತ್ತಿದೆ ಎಂದರು.

ಮಂಜುನಾಥ ಉಮಚಗಿ ಕನ್ನಡ ಗೀತಗಾಯನ ಕಾರ್ಯಕ್ರಮ ನಡೆಸಿಕೊಟ್ಟರು. ಕನ್ನಡ ಭಾಷಾಭಿಮಾನದ ಹಲವಾರು ಗೀತೆಗಳನ್ನು ಹಾಡಿ ರಂಜಿಸಿದರು. ಶಿಕ್ಷಕ ರಾಜೇಶ ಶೆಟ್ಟರ, ನಾಗರಾಜ ಶರಣಾರ್ಥಿ ಮುಖ್ಯ ಇದ್ದರು.

ಕಸಾಪ ತಾಲೂಕು ಘಟಕದ ಎಸ್.ಬಿ. ಅಣ್ಣಿಗೇರಿ ಸ್ವಾಗತಿಸಿದರು. ಶಂಕರ ಶಿಳ್ಳಿನ ವಂದಿಸಿದರು. ಶಿಕ್ಷಕ ಪ್ರಕಾಶ ಜ್ಯೋತಿ ಕಾರ್ಯಕ್ರಮ ನಿರೂಪಿಸಿದರು. ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಶಿಕ್ಷಕ ಪ್ರಭು ಹಾಲಗುಂಡಿ, ಆರ್.ಎಸ್. ಪಾಟೀಲ, ವೈ.ಎಂ. ಶಿರೂರು ಇದ್ದರು. ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಕಳ್ಳತನ ಪ್ರಕರಣದ ಆರು ಆರೋಪಿಗಳ ಬಂಧನ

ಹಾವೇರಿ: ಜಿಲ್ಲೆಯಸವಣೂರುತಾಲೂಕುಕಳಲಕೊಂಡಗ್ರಾಮದಮನೆಯೊಂದರಲ್ಲಿ ನಡೆದಿದ್ದ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಆರು ಜನ ಆರೋಪಿಗಳನ್ನು ಪೊಲೀಸರು ಪತ್ತೆ ಮಾಡಿ, ಆರೋಪಿಗಳಿಂದ 6.40 ಲಕ್ಷ ರು. ಮೌಲ್ಯದ ಚಿನ್ನಾಭರಣವನ್ನು ವಶಕ್ಕೆ ಪಡೆಯಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯಶೋದಾ ವಂಟಗೋಡಿ ತಿಳಿಸಿದ್ದಾರೆ.

ಗದಗ ಜಿಲ್ಲೆ ಲಕ್ಷ್ಮೇಶ್ವರ ತಾಲೂಕು ಆದರಹಳ್ಳಿ ಗ್ರಾಮದ ಅರ್ಜುನ ಲಿಂಗಪ್ಪ ಪವಾರ (28), ಆಕಾಶ ಗೋಪಿ ಲಮಾಣಿ (19), ಡಿಸ್ಟ್ ಲಿಂಗಪ್ಪ ಪವಾರ (40), ಲಿಂಗಪ್ಪ ದದಬಾ ಪವಾರ (52), ಮಲ್ಲಿಕಾರ್ಜುನ ಗೋಪಿ ಲಮಾಣಿ (25) ಹಾಗೂ ಗಣೇಶ ಲಿಂಗಪ್ಪ ಪವಾರ (20) ಎಂಬ ಆರೋಪಿಗಳನ್ನು ದಸ್ತಗಿರಿ ಮಾಡಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಆರೋಪಿಗಳಿಂದ ಈ ಪ್ರಕರಣಕ್ಕೆ ಸಂಬಂಧಿಸಿದಂತೆ 6.40 ಲಕ್ಷ ರು. ಮೌಲ್ಯದ ಚಿನ್ನಾಭರಣವಶಪಡಿಸಿಕೊಳ್ಳಲಾಗಿದೆ.

ಉಚಿತ ವೃತ್ತಿ ತರಬೇತಿ

ಗದಗ: ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ ಮತ್ತು ಯುವತಿಯರನ್ನುಸ್ವಾವಲಂಬಿಗಳನ್ನಾಗಿ ಮಾಡಲು ಹುಲಕೋಟಿಯ ಎಸ್‌ಬಿಐ-ಎಎಸ್‌ಎಫ್ ಆರ್ ಸೆಟಿ(ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ) ವತಿಯಿಂದ ಮೇ ತಿಂಗಳಲ್ಲಿ ವಿವಿಧ ವೃತ್ತಿ ತರಬೇತಿಗಳನ್ನು ಆಯೋಜಿಸಲಾಗಿದೆ.

ಹುಲಕೋಟಿಯ ಕೆವಿಕೆ ಆವರಣದಲ್ಲಿರುವ ಸಂಸ್ಥೆಯಲ್ಲಿ ಕುರಿ ಸಾಕಾಣಿಕೆ, ಮಹಿಳೆಯರ ಬ್ಯೂಟಿ ಪಾರ್ಲರ್‌ನಿರ್ವಹಣೆ, ಮೊಬೈಲ್ ರಿಪೇರಿ ಹಾಗೂ ಆರಿ ವರ್ಕ್(ಕಸೂತಿ) ತರಬೇತಿಗಳು ಆರಂಭವಾಗಲಿವೆ. ಈ ತರಬೇತಿಗಳು ಸಂಪೂರ್ಣ ಉಚಿತವಾಗಿದ್ದು, ಆಯ್ಕೆಯಾದ ಅಭ್ಯರ್ಥಿಗಳಿಗೆ ಉಚಿತ ಊಟ ಮತ್ತು ವಸತಿ ಸೌಲಭ್ಯವನ್ನು ಸಂಸ್ಥೆಯೇ ಕಲ್ಪಿಸಲಿದೆ. ಸ್ವಂತ ಉದ್ಯೋಗ ಆರಂಭಿಸಲು ಬ್ಯಾಂಕ್ ಸಾಲ ಸೌಲಭ್ಯಕ್ಕೂ ಮಾರ್ಗದರ್ಶನ ನೀಡಲಾಗುವುದು ಎಂದು ಎಸ್‌ಬಿಐ ಬ್ಯಾಂಕಿನನಿರ್ದೇಶಕರುಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಮೊ. 9632287949, 8880169996 ಸಂಪರ್ಕಿಸಲು ಕೋರಲಾಗಿದೆ.

ಅರ್ಜಿ ಆಹ್ವಾನ

ಗದಗ: ಚಾಮರಾಜೇಂದ್ರ ಸರ್ಕಾರಿ ದೃಶ್ಯ ಕಲಾ ಕಾಲೇಜು(ಕಾವಾ) ಸಿದ್ಧಾರ್ಥನಗರ, ಮೈಸೂರು ಇಲ್ಲಿ 2026-2027ನೇಸಾಲಿಗೆ ಬ್ಯಾಚುಲರ್ ಆಫ್ ವಿಜ್ಯುವಲ್ ಆರ್ಟ್ಸ್(ಬಿವಿಎ) ತರಗತಿಗಳ ಪ್ರವೇಶಾತಿಗಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಮೇ 30 ಕೊನೆಯ ದಿನ. ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸರ್ಕಾರದ ಅಂತರ್ಜಾಲ ವಿಳಾಸದ https://uucms.karnataka.gov.in or https//www.cavamysore,karnataka.gov.in ಮೂಲಕವೇ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಪ್ರವೇಶಾತಿಗಾಗಿ ಅರ್ಹತಾ ಪರೀಕ್ಷೆ, ಸಂದರ್ಶನದ ದಿನಾಂಕದ ಮಾಹಿತಿ ಪ್ರತ್ಯೇಕವಾಗಿ ತಿಳಿಸಲಾಗುವುದು. ಹೆಚ್ಚಿನಮಾಹಿತಿಗಾಗಿಕಾರ್ಯಾಲಯದ ಸಹಾಯವಾಣಿ 0821-2438931 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.